ಸಂಪುಟ 01 | ಸಂಚಿಕೆ 143 | ಬುಧವಾರ 29 ಜುಲೈ 2026 | ಪುಟ 4 | ಬೆಲೆ-2 ರೂ.

ಇರ್ಫಾನ್ ಕೆ
ಸಂಪಾದಕರು

M A ವಹಾಬ್
ಪ್ರಧಾನ ಸಂಪಾದಕರು

# ನೈಜ್ಯ ದೇಸೆ

NAIJYA DESE

ಸತ್ಯದ ದಿಕ್ಕು TRUE PATH

ಕನ್ನಡ ದಿನ ಪತ್ರಿಕೆ

ಸಿಂಧನೂರು, ಮಸ್ಕಿ
ಮಾನ್ವಿ, ಅಂಗಸೂರು,
ರಾಯಚೂರ,ದೇವದುರ್ಗ
ಬಳ್ಳಾರಿ, ಕೊಪ್ಪಳ
ಯಾದಗಿರಿ, ಕಲಬುರ್ಗಿ,
ಬೀದರ, ವಿಜಯಪುರ.
ಗದಗ, ವಿಜಯನಗರ.
ಏಕಕಾಲಕ್ಕೆ ಪ್ರಕಟಣೆ

REGIONAL KANNADA DAILY MORNING

RNI code: KNKAN/25/A3581 ಮೋ: 9902277588, 9880707587, 9008787586 naijyadese@gmail.com

## ಈ ದಿನದ ವಿಶೇಷ

1) ಅಂತರರಾಷ್ಟ್ರೀಯ ಹುಲಿ ದಿನ (International Tiger Day / Global Tiger Day)

ಪ್ರತಿ ವರ್ಷ ಜುಲೈ 29 ರಂದು ಆಚರಿಸಲಾಗುತ್ತದೆ. ಹುಲಿಗಳ ಸಂರಕ್ಷಣೆ, ಅವುಗಳ ನೈಸರ್ಗಿಕ ಆವಾಸಸ್ಥಾನಗಳ ರಕ್ಷಣೆ ಹಾಗೂ ಜೀವವೈವಿಧ್ಯದ ಮಹತ್ವದ ಬಗ್ಗೆ ಜಾಗೃತಿ ಮೂಡಿಸುವುದು ಈ ದಿನದ ಉದ್ದೇಶ.

2) ಗುರು ಪೂರ್ಣಿಮೆ (Guru Purnima)

2026ರಲ್ಲಿ ಗುರು ಪೂರ್ಣಿಮೆ ಜುಲೈ 29ರಂದು ಆಚರಿಸಲಾಗುತ್ತದೆ. ಜ್ಞಾನ, ಮಾರ್ಗದರ್ಶನ ಮತ್ತು ಮೌಲ್ಯಗಳನ್ನು ನೀಡಿದ ಗುರುಗಳು, ಶಿಕ್ಷಕರು ಹಾಗೂ ಆಧ್ಯಾತ್ಮಿಕ ಮಾರ್ಗದರ್ಶಕರಿಗೆ ಗೌರವ ಸಲ್ಲಿಸುವ ಪವಿತ್ರ ದಿನವಾಗಿದೆ.

## ಸುಭಾಷಿತ


ನಮ್ಮೆಲ್ಲ ಸಮಸ್ಯೆಗಳು ಪರಿಹಾರಗೊಳ್ಳುವ
ತನಕ ಚಳವಳಿಗಳನ್ನು
ಜೀವಂತವಾಗಿಟ್ಟಿರುವುದು ಅತ್ಯಗತ್ಯ

–ಕುವೆಂಪು

## ಬಸವಸಾಗರ ಆಣೆಕಟ್ಟು ನಾರಾಯಣಪುರ ಡ್ಯಾಮ್ ಫುಲ್

❑ ನೈಜ್ಯ ದೆಸೆ ನ್ಯೂಸ್

**ಯಾದಗಿರಿ: ಜಿಲ್ಲೆಯ ಹುಣಸಗಿ ತಾಲೂಕಿನಲ್ಲಿ ಬರುವ ಬಸವಸಾಗರ ಅಣೆಕಟ್ಟು ನಾರಾಯಣಪುರ ತುಂಬಿದ್ದು. ಬಸವಸಾಗರ ಅಣೆಕಟ್ಟಿನ ಬಲದಂಡೆ ಕೆನಲನೀರು ಹರಿಸಲಾಗಿದೆ. ರೈತರ ಮೊಗದಲ್ಲಿ ಮಂದಹಾಸ ಬೀರಿದೆ. ರೈತರು ಮುಂಗಾರು ಹಂಗಾಮಿನ ಭತ್ತನಾಟಿ ಮಾಡಲು ಉಮ್ಮಸ್ಸಿನಿಂದ ಶುರು ಮಾಡಿದ್ದಾರೆ.**



ಮಹಾರಾಷ್ಟ್ರದ ಪಶ್ಚಿಮ ಘಟ್ಟಗಳಲ್ಲಿ ಬಾರಿ ಪ್ರಮಾಣದ ಮಳೆ ಸುರಿದು ಕಾರಣ ಲಾಲ್ ಬಹುದ್ದೂರ್ ಶಾಸ್ತ್ರಿ ಅಣೆಕಟ್ಟು ಆಲಮಟ್ಟಿ ಹಾಗೂ ಬಸವಸಾಗರ ಅಣೆಕಟ್ಟು ನಾರಾಯಣಪುರ ಡ್ಯಾಮ ಭರ್ತಿಯಾಗಿದ್ದು. ಬರ್ತಿಯಾದ ಕಾರಣ ಕೃಷ್ಣಾ ನದಿಗೆ ನೀರನ್ನು ಹರಿ ಬಿಡಲಾಗಿದೆ. ರೈತರ ಬೆಳೆಗಳಿಗೆ ನೀರನ್ನು ಹರಿಬಿಡುತ್ತಿದ್ದಾರೆ. ಸರ್ಕಾರದ ಆದೇಶದಂತೆ ದಿನಾಂಕ 28. 07.2026 ರಂದು ವಿಧಾನಸೌಧದಲ್ಲಿ ಜಲಸಂಪನ್ಮೂಲ ಸಚಿವರು ಕೃಷ್ಣ ಮೇಲ್ದಂಡೆ ಯೋಜನೆ ಅಧಿಕಾರಿಗಳು. ಕೂಡಿಕೊಂಡು ಸಲಹಾ ಸಮಿತಿ ಮೀಟಿಂಗ್ ಅನ್ನು ಕರೆದಿದ್ದಾರೆ. ರೈತರಲ್ಲಿ ಇನ್ನೊಂದು ಸಂಶಯ ಮೂಡುತಾಗಿದೆ. ರೈತ–ರಿಗೆ ವಾರ ಬಂದಿ ಪದ್ಧತಿಯನ್ನು ಸರ್ಕಾರ ಮಾಡುತ್ತಿದೆ. ಸರ್ಕಾರ ಕೈಬಿಡಬೇಕು ಎಂದು ರೈತರು ನೈಜ್ಯ ದೇಶ ಮಾಧ್ಯಮದೂರ ಮುಖಾಂತರ ಸರಕಾರಕ್ಕೆ ಒತ್ತಾಯಿಸುತ್ತಿದ್ದಾರೆ.

# ಸಿಜೆಪಿ ಪ್ರತಿಭಟನೆ ಮತ್ತು ವಿದ್ಯಾರ್ಥಿಗಳ ದೌರ್ಜನ್ಯ

# ಪ್ರಕರಣದ ಸಮಗ್ರ ತನಿಖೆಗೆ ಸುಪ್ರೀಂ ಆದೇಶ

❑ ನೈಜ್ಯ ದೆಸೆ ನ್ಯೂಸ್

**ನವದೆಹಲಿ: ನೀಟ್–ಯುಜಿ ಪರೀಕ್ಷಾ ಅಕ್ರಮಗಳ ವಿರುದ್ಧ ವಿದ್ಯಾರ್ಥಿಗಳು ನಡೆಸಿದ ಪ್ರತಿಭಟನೆಯ ವೇಳೆ ನಡೆದ ಹಿಂಸಾಚಾರ ಹಾಗೂ ಪೊಲೀಸರ ದೌರ್ಜನ್ಯದ ಆರೋಪಗಳ ಕು–ರಿತು ಸ್ವತಂತ್ರ, ಪಾರದರ್ಶಕ ಮತ್ತು ಸಮಗ್ರ ತನಿಖೆ ನಡೆಸುವಂತೆ ಸುಪ್ರೀಂ ಕೋರ್ಟ್ ಸೂಚಿಸಿದೆ.**



ಅದೇ ಸಮಯದಲ್ಲಿ, ಕಾನೂನನ್ನು ಕೈಗೆತ್ತಿಕೊಳ್ಳುವ ಅಥವಾ ಮಿತಿಮೀರಿದ ವರ್ತನೆ ತೋರುವ ಯಾರೇ ಆಗಲಿ, ಅವರು ಕಠಿಣ ಪರಿಣಾಮಗಳನ್ನು ಎದುರಿಸಬೇಕಾಗುತ್ತದೆ ಎಂದು ನ್ಯಾಯಾಲಯ ಕಟ್ಟುನಿಟ್ಟಿನ ಎಚ್ಚರಿಕೆ ನೀಡಿದೆ. ದೆಹಲಿಯ ಜಂತರ್ ಮಂತರ್‌ನಲ್ಲಿ ನಡೆದ ಪ್ರತಿಭಟನೆಗಳ ಸಂದರ್ಭದಲ್ಲಿ ಪ್ರತಿಭಟನಾ ನಿರತ ವಿದ್ಯಾರ್ಥಿಗಳು ಹಾಗೂ ಕಾರ್ಯಕರ್ತರ ವಿರುದ್ಧ ನಡೆದ ಪೊಲೀಸ್ ಕ್ರಮ ಮತ್ತು ಅಶ್ರುವಾಯು ಶೆಲ್ ಪ್ರಯೋಗದ ಕುರಿತು ಏಕೆ ಸ್ವತಂತ್ರ ತನಿಖೆ ನಡೆಸಬಾರದು ಎಂದು ಸುಪ್ರೀಂ ಕೋರ್ಟ್ ಪ್ರಶ್ನಿಸಿದೆ. ಕಾನೂನಿನ ಮಿತಿಗಳನ್ನು ಮೀರಿ ಮುಗ್ಧ ಜನರ ಮೇಲೆ ಬಲಪ್ರಯೋಗಿಸಿ ದೌರ್ಜನ್ಯ ಎಸಗಿದ ಯಾರೇ ಆಗಲಿ, ಅವರ ವಿರುದ್ಧ ಸೂಕ್ತ ಕಾನೂನು ಕ್ರಮ ಜರುಗಿಸಲಾಗುವುದು ಎಂದು ಭಾರತದ ಮುಖ್ಯ ನ್ಯಾಯಮೂರ್ತಿ ಸೂರ್ಯ ಕಾಂತ್ ಇಂದು ಎಚ್ಚರಿಕೆ ನೀಡಿದ್ದಾರೆ.ಜು.20 ರಂದು ನಡೆದಿದ್ದ ಸಂಸತ್ತು ಮೆರವಣಿಗೆಯ ಪ್ರತಿಭಟನೆಯ ವೇಳೆ ಪೊಲೀಸರು ನಡೆಸಿದ ದೌರ್ಜನ್ಯ ಹಾಗೂ ಅತಿರೇಕದ ಕ್ರಮವನ್ನು ಪ್ರಶ್ನಿಸಿ ಸಲ್ಲಿಕೆಯಾದ ವಿವಿಧ ಅರ್ಜಿಗಳ ವಿಚಾರಣೆಯನ್ನು ಸುಪ್ರೀಂ ಕೋರ್ಟ್ ನಡೆಸಿತು.

ಸಿಜೆಐ ಸೂರ್ಯ ಕಾಂತ್, ನ್ಯಾಯಮೂರ್ತಿ ಜೋಯಲ್ಯ ಬಾಗ್ಚಿ ಮತ್ತು ನ್ಯಾಯಮೂರ್ತಿ ವಿ.ಮೋಹನ ಅವರನ್ನೊಳಗೊಂಡ ಪೀಠವು ಈ ವಿಚಾರಣೆಯ ನೇತೃತ್ವ ವಹಿಸಿದೆ. ವಿಚಾರಣೆ ವೇಳೆ ಮಾತನಾಡಿದ ಸಿಜೆಐ, ಈ ಸಂಪೂರ್ಣ ಘಟನೆಯ ಬಗ್ಗೆ ಸಮಗ್ರ ತನಿಖೆ ನಡೆಯಬೇಕು. ತನಿಖೆ ಸ್ವತಂತ್ರ, ನಿಷ್ಪಕ್ಷಪಾತ ಮತ್ತು ಪಾರದರ್ಶಕವಾಗಿರಬೇಕು. ಹೊಣೆಗಾರಿಕೆಯನ್ನು ನಿಗದಿಪಡಿಸದಿದ್ದರೆ ಇಂತಹ ತನಿಖೆಗಳಿಗೆ ಯಾವುದೇ ಅರ್ಥವಿರುವುದಿಲ್ಲ ಎಂದು ಅಭಿಪ್ರಾಯಪಟ್ಟರು.

ಅಲ್ಲದೆ, ಈ ತನಿಖೆಯ ಸಂಂ–ಯೋಜನೆ ಮತ್ತು ಸಮಿತಿಯ ಸ್ವರೂಪವನ್ನು ಶೀಘ್ರದಲ್ಲೇ ಪ್ರಕಟಿಸುವುದಾಗಿ ನ್ಯಾಯಾಲಯ ತಿಳಿಸಿದೆ.ಪ್ರತಿಭಟನೆಯ ಹಕ್ಕು ಪ್ರತಿಯೊಬ್ಬ–ರಿಗೂ ಇದೆ, ಆದರೆ ಯಾರೇ ಆಗಲಿ ಕಾನೂನನ್ನು ತಮ ಕೈಗೆ ತೆಗೆದುಕೊಂಡರೆ ಅಥವಾ ಮಿತಿಮೀ–ರಿದ ಕೃತ್ಯಗಳನ್ನು ಎಸಗಿದರೆ ಅವರ ವಿರುದ್ಧ ಕಠಿಣ ಕಾನೂನು ಕ್ರಮ ಕೈಗೊಳ್ಳಲೇಬೇಕು ಎಂದು ನ್ಯಾಯಾಲಯ ಸ್ಪಷ್ಟಪಡಿಸಿದೆ. ಪ್ರತಿಭಟನೆಗಳ ಸಮಯದಲ್ಲಿ ನಿಗದಿತ ಶಿಷ್ಟಾಚಾರಗಳು ಮತ್ತು ನಿಯಮಗಳ ಉಲ್ಲಂಘನೆಯಾಗಿರುವ ಕುರಿತು ಚರ್ಚೆ ನಡೆಸಿರುವ ನ್ಯಾಯಪೀಠ, ಇಂತಹ ಪ್ರಕರಣಗಳನ್ನು ಕಾನೂನು ತನ್ನ ಹಾದಿಯಲ್ಲಿ ನೋಡಿಕೊಳ್ಳಲಿದೆ ಎಂದು ಅಭಿಪ್ರಾಯಪಟ್ಟಿದೆ.ನೀಟ್ ಪರೀಕ್ಷೆಯ ಅಕ್ರಮಗಳನ್ನು ಖಂಡಿಸಿ ದೆಹಲಿಯಲ್ಲಿ ವಿದ್ಯಾರ್ಥಿಗಳು ಹಾಗೂ ವಿವಿಧ ರಾಜಕೀಯ ಸಂಘಟನೆಗಳು ತೀವ್ರ ಸ್ವರೂಪದ ಪ್ರತಿಭಟನೆಗಳನ್ನು ನಡೆಸಿದ್ದವು. ಸಂಸದ್ ಚಲೋ ಮೆರವಣಿಗೆಯ ಸಂದರ್ಭದಲ್ಲಿ ಪರಿಸ್ಥಿತಿ ವಿಕೋಪಕ್ಕೆ ತಿರುಗಿತ್ತು. ಪ್ರತಿಭಟನಾಕಾರರನ್ನು ಚದುರಿಸಲು ದೆಹಲಿ ಪೊಲೀಸ್ ಸಿಬ್ಬಂದಿ ಅಶ್ರುವಾಯು ಶೆಲ್‌ಗಳನ್ನು ಹಾರಿಸಿದ್ದು ಭಾರೀ ವಿವಾದಕ್ಕೆ ಕಾರಣವಾಗಿತ್ತು.

ಇದರ ಬೆನ್ನಲ್ಲೇ ಪೊಲೀಸರ ದೌರ್ಜನ್ಯದ ವಿರುದ್ಧ ವ್ಯಾಪಕ ಆಕ್ರೋಶ ವ್ಯಕ್ತವಾಗಿತ್ತು.ಪ್ರಜಾಸತ್ತಾತಕವಾಗಿ ಪ್ರತಿಭಟಿಸುವ ಹಕ್ಕಿಗೆ ಧಕ್ಕೆಯಾಗದಂತೆ ಹಾಗೂ ಕಾನೂನು ಸುವ್ಯವಸ್ಥೆ ಹದಗೆಡದಂತೆ ನೋಡಿಕೊಳ್ಳಲು ನ್ಯಾಯಾಲಯ ಮತ್ತು ಆಡಳಿತ ಯಂತ್ರಗಳು ಈಗ ಕಟ್ಟುನಿಟ್ಟಿನ ಕ್ರಮಗಳನ್ನು ಕೈಗೊಳ್ಳುತ್ತಿವೆ.

## ಕಾರುಣ್ಯಾಶ್ರಮದ ಡಾ. ಚನ್ನಬಸವ ಸ್ವಾಮಿ ಹಿರೇಮಠ ಅವರ ಜನ್ಮದಿನದ ಅಂಗವಾಗಿ ನಾಡಿನ ಜನರ ಶುಭಾಶೀರ್ವಾದ

❑ ನೈಜ್ಯ ದೆಸೆ ನ್ಯೂಸ್

**ಸಿಂಧನೂರು: ನಗರದ ಒಳಬಳ್ಳಾರಿ ರಸ್ತೆಯಲ್ಲಿರುವ ಕರ್ನಾಟಕ ಸರ್ಕಾರದ ರಾಜ್ಯ ಪ್ರಶಸ್ತಿ ಪುರಸ್ಕೃತ ಸಂಸ್ಥೆ ಯಾದ ಶ್ರೀಮಠ ಸೇವಾ ಟ್ರಸ್ಟ್ (ರಿ) ಹರೇಟನೂರು ಕಾರುಣ್ಯ ನೆಲೆ ವೃದ್ಧಾಶ್ರಮ ಹಾಗೂ ವಯಸ್ಕರ ಬುದ್ಧಿಮಾಂದ್ಯ ಆಶ್ರಮದ ಕಾರ್ಯಾಧ್ಯಕ್ಷರಾದ ಡಾ. ಚನ್ನಬಸವ ಸ್ವಾಮಿ ಹಿರೇಮಠ ಅವರ ಜನ್ಮದಿನ ಸಮಾರಂಭವು ದಿನಾಂಕ 22–07–2026 ರಂದು ಆಶ್ರಮದಲ್ಲಿ ನಾಡಿನ ಜನರ ಹರಕೆ ಆಶೀರ್ವಾದದೊಂದಿಗೆ ಅರ್ಥಪೂರ್ಣವಾಗಿ ನೆರವೇರಿತ್ತು.**





ಆದರೆ ನಿರಂತರ ಪ್ರತಿದಿನವೂ ಕೂಡ ರಾಜ್ಯ ಮತ್ತು ಬೇರೆ ರಾಜ್ಯದ ಕರುಣಾಮಯಿ ಮನಸ್ಸುಗಳು ಕಾರುಣ್ಯ ಕುಟುಂಬಕ್ಕೆ ಖುದ್ದು ಭೇಟಿ ನೀಡಿ ವಾಸ್ತವ ಸ್ಥಿತಿಯನ್ನು ನೋಡಿ ಆಶ್ರಮದ ಸೇವೆಗೆ ಉತ್ತಮ ಪ್ರತಿಕ್ರಿಯೆ ವ್ಯಕ್ತಪಡಿಸುವುದರ ಮೂಲಕ ಡಾ. ಚನ್ನಬಸವಸ್ವಾಮಿ ಹಿರೇಮಠ ಅವರನ್ನು ಸನ್ಮಾನಿಸಿ ಗೌರವಿಸಿ ಆಶೀರ್ವದಿಸುತ್ತಿದ್ದಾರೆ. ವಿಜಯನಗರ ಜಿಲ್ಲೆಯ ಹೊಸಪೇಟೆಯಿಂದ ಬಿ. ಶ್ವೇತಾ ಬಿ. ಶ್ರೀಧರ ಶೆಟ್ಟಿ ಹಾಗೂ ನಂದೀಶ ಶೆಟ್ಟಿ ಮತ್ತು ಕಲಬುರ್ಗಿಯಿಂದ ಬಿ. ಎಸ್. ಹಡಗಲಿ ಪ್ರಧಾನ ಸಂಪಾದಕರು ಶ್ರೀ ನ್ಯೂಸ್ 24ಕನ್ನಡ ಹಾಗೂ ಶರಣಕುಮಾರಸ್ವಾಮಿ. ಮಲ್ಲಿಕಾರ್ಜುನ ಭಜಂತ್ರಿ ಮತ್ತು ಅರಕೇರಾ ಪಟ್ಟಣದ ಆಶ್ರಮದ ಸದಸ್ಯರಾದ ಮಹಾಂತೇಶ ಪೂಜಾರಿ ಮತ್ತು ಇನ್ನು ಅನೇಕ ಹಲವಾರು ಜಿಲ್ಲೆಯಿಂದ ಬಂದು ಸನ್ಮಾನ ಮಾಡುವ ಮೂಲಕ ಹಾರೈಸುತ್ತಿದ್ದಾರೆ. ಈ ಸಮಯದಲ್ಲಿ ಆಶ್ರಮದ ಕಾರ್ಯ ಅಧ್ಯಕ್ಷರಾದ ಡಾ. ಚನ್ನಬಸವ ಸ್ವಾಮಿ ಹಿರೇಮಠ ಬಹು ದೂರದಿಂದ ಕರುಣೆಯ ಹೃದಯಗಳು ಬಂದು ನನ್ನನ್ನು ಗೌರವಿಸಿ ಜನ್ಮದಿನ ಮುಗಿದರೂ ಕೂಡ ಆಶೀರ್ವದಿಸುತ್ತಿರುವುದು ನನ್ನ ಪೂರ್ವ ಜನ್ಮದ ಪುಣ್ಯ ನಿರಂತರ ದಾನಿಗಳ ಸಹಾಯ ಸಹಕಾರದೊಂದಿಗೆ ಮಾಡುತ್ತಿರುವ ಈ ಸಾಮಾಜಿಕ ಜವಾಬ್ದಾರಿ ನನಗೆ ಇನ್ನೂ ಹೆಚ್ಚು ಸೇವೆ ಮಾಡಲು ಸ್ಫೂರ್ತಿಯಾಗಿದೆ.

ದಿನಾಲು ಕೂಡ ಬೇರೆ ಬೇರೆ ಕಡೆಯಿಂದ ಬಂದು ನನ್ನನ್ನು ಸನ್ಮಾನಿಸಿ ಶುಭ ಕೋರಿ ಆಶೀರ್ವದಿಸುತ್ತಿರುವ ಮತ್ತು ನನ್ನ ಹುಟ್ಟು ಹಬ್ಬಕ್ಕೆ ಹರಸಿ ಹಾರೈಸಿದ ಎಲ್ಲಾ ಎಲ್ಲಾ ಕರುಣೆಯ ಕಾರುಣ್ಯ ಮೂರ್ತಿಗಳಿಗೆ ಹೃದಯಪೂರ್ವಕ ಹೃತ್ಪೂರ್ವಕ ಧನ್ಯವಾದಗಳು ಎಂದು ತಮ್ಮ ಅನಿಸಿಕೆಗಳನ್ನು ಹಂಚಿಕೊಂಡರು.

## ಮುಧೋಳದಲ್ಲಿ ರೌಡಿ ಪರೇಡ್ ಶಾಂತಿ ಕದಡಿದರೆ ಎಚ್ಚರಿಕೆ

❑ ನೈಜ್ಯ ದೆಸೆ ನ್ಯೂಸ್

**ಬಾಗಲಕೋಟೆ: ಜಿಲ್ಲೆಯ ಮುಧೋಳ ತಾಲೂಕಿನಲ್ಲಿ ಮುಧೋಳ ವೃತ್ತ ಕಚೇ–ರಿಯಲ್ಲಿ ರೌಡಿ ಪರೇಡ್ ಮಾಡಲಾಯಿತು.**




ರೌಡಿಗಳಿಗೆ ಸಮಾಜದಲ್ಲಿ ಶಾಂತಿ ಕಾಪಾಡುವಂತೆ ಹಾಗೂ ಯಾವುದೇ ರೀತಿಯ ಕಾನೂನುಬಾಹಿರ ಚಟುವಟಿಕೆಗಳಲ್ಲಿ ತೊಡಗಿಕೊಳ್ಳದಂತೆ ಪೊಲೀಸರು ಕಟ್ಟುನಿಟ್ಟಿನ ಸೂಚನೆಗಳನ್ನು ನೀಡಿದ್ದಾರೆ ಮಾತನಾಡಿದ ಪೊಲೀಸ್ ಅಧಿಕಾರಿಗಳು ಸಾರ್ವಜನಿಕರಲ್ಲಿ ಭಯ ಆತಂಕ ಉಂಟುಮಾಡುವ ಕೃತ್ಯಗಳು ಹಾಗೂ ಬೆದರಿಕೆ ಹಾಗು ಮಾದಕ ವಸ್ತುಗಳ ಮಾರಾಟ ಸಾಗಾಟ ಹಾಗೂ ಇತರೆ ಅಪರಾಧ ಚಟುವಟಿಕೆಗಳಲ್ಲಿ ಭಾಗಿ ಆದರೆ ಕಾನೂನ ಪ್ರಕಾರ ಕ್ರಮ ಕೈಗೊಳ್ಳಲಾಗುವುದು ಎಂದು ಎಚ್ಚ–ರಿಸಿದ್ದಾರೆ ಸಾರ್ವಜನಿಕರೊಂದಿಗೆ ಸೌಹಾರ್ದತವಾಗಿ ನಡೆದುಕೊಳ್ಳುವಂತೆ ಸಮಾಜದ ಶಾಂತಿ ಕದಡುವ ಯಾವುದೇ ಕೃತ್ಯಗಳಲ್ಲಿ ಭಾಗಿಯಾಗದಂತೆ ಅಪರಾಧ ಚಟುವಟಿಕೆಗಳಲ್ಲಿ ತೊಡಗಿರುವ ಮೇಲೆ ನಿಗಾ ವಹಿಸಲಾಗಿದ್ದು ಕಾನೂನು ಸುವ್ಯವಸ್ಥೆಗೆ ಧಕ್ಕೆ ತರುವವರ ವಿರುದ್ಧ ಕಠಿಣ ಕ್ರಮ ಜರುಗಿಸಲಾಗುವುದು ಎಂದು ಪೊಲೀಸರು ತಿಳಿಸಿದ್ದಾರೆ .

## ಸುಮಧುರ ಗೀತೆಗಳ ದೇವತೆ ಎಸ್ ಜಾನಕಿಯವರ ಸ್ವರ ಶ್ರದ್ಧಾಂಜಲಿ ಕಾರ್ಯಕ್ರಮ

❑ ನೈಜ್ಯ ದೆಸೆ ನ್ಯೂಸ್

**ಹಾಲಾಪೂರ: ಎಸ್ ಜಾನಕಿ ಗಾಯಕಿಂ–ಚುವರು ದಕ್ಷಿಣ ಭಾರತದ ಗಾನ ಕೋಗಿಲೆ ಎಂದೇ ಪ್ರಸಿದ್ದಿ ಪಡೆದ ಅವರು ಅಗಾಲಿಕೆ ಇಡಿ ದೇಶಕ್ಕೆ ತುಂಬಲಾರದ ನಷ್ಟ,ಅದಕ್ಕಾಗಿ ಹಾಲಾಪೂರದಲ್ಲಿ ಸ್ವರ ಶ್ರದ್ಧಾಂಜಲಿ ಕಾರ್ಯಕ್ರಮ ನಡೆಯಿತು.ಪೂಜೆಯನ್ನು ಶ್ರೀ ಬಸವರಾಜಸ್ವಾಮಿ ಯವರು ನೆರೆವೆರಿಸಿದರು.**



ಎಸ್ ಜಾನಕಿಯವರು ಆರು ದಶಕಗಳಿಗೂ ಅಧಿಕ ಕಾಲ ಸಂಗೀತ ಸೇವೆ ಸಲ್ಲಿಸಿರುವ ಇವರು 17 ಹೆಚ್ಚು ಭಾಷೆಗಳಲ್ಲಿ 48 ಸಾವಿರ ಹಾಡುಗಳನ್ನು ಹಾಡಿದ ಕೀರ್ತಿ ಇವರದು,1957 ರಲ್ಲಿ ಮೊಟ್ಟಮೊದಲ ಬಾರಿಗೆ ಚಲನಚಿತ್ರರಂಗಕ್ಕೆ ಪ್ರವೇಶಿಸಿ, ನಾಲ್ಕು ಬಾರಿ ರಾಷ್ಟ್ರೀಯ ಸಿನಿಮಾ ಕ್ಷೇತ್ರದಲ್ಲಿ ಉತ್ತಮ ಹಿನ್ನೆಲೆ ಗಾಯಕಿ ಪ್ರಶಸ್ತಿಗೆ ಭಾಜನರಾಗಿದ್ದು,ಅದರಲ್ಲೂ ಅವರು ಹುಟ್ಟಿದ್ದು ಆಂದ್ರಪ್ರದೇಶದ ಗೂಂಟೂರು, ಬಹುತೇಕ ಬೆಳದಿದ್ದು ಹಾಡಿದ್ದು ಕೊನೆಯ ಉಸಿರು ಇರುವರೆಗೂ ಜೀವಿಸಿದ್ದು ಕರ್ನಾಟಕ ಗಂಧದನಾಡು ಮೈಸೂರು, ಕನ್ನಡಿಗರಿಗೆ ಹೆಮ್ಮೆಯ ಸಂಗತಿ.

ಈ ಸಂದರ್ಭದಲ್ಲಿ ಊರಿನ ಗಣ್ಯರು, ಕಲಾವಿದರು, ಇನ್ನಿತರರು ಭಾಗವಹಿಸಿ ಸ್ವರ ಶ್ರದ್ಧಾಂಜಲಿ ಕಾರ್ಯಕ್ರಮ ನಡೆಸಿ,ಸ್ಥಳೀಯ ಅನೇಕ ಗಣ್ಯರು, ಕಲಾವಿದರು ನುಡಿನಮನ ಹಾಗೂ ಸಂಗೀತ ಸೇವೆ ನಡೆಸಿದರು.

# ಅಕ್ರಮ ಮರಳು ಗಣಿಗಾರಿಕೆ ಹಾಗೂ ಸಾಗಾಣಿಕೆಗೆ ಬ್ರೇಕ್, ಗೃಹ ಸಚಿವ ಪ್ರಿಯಾಂಕ್ ಖರ್ಗೆ ಖಡಕ್ ಸೂಚನೆ

❑ ನೈಜ್ಯ ದೆಸೆ ನ್ಯೂಸ್

**ಬೆಂಗಳೂರು : ರಾಜ್ಯದಲ್ಲಿ ಅಕ್ರಮ ಮರಳು ಗಣಿಗಾರಿಕೆ, ಸಂಗ್ರಹಣೆ ಹಾಗೂ ಸಾಗಾಣಿಕೆಯನ್ನು ಸಂಪೂರ್ಣವಾಗಿ ತಡೆಗಟ್ಟುವ ಉದ್ದೇಶದಿಂದ ಗೃಹ ಸಚಿವ ಪ್ರಿಯಾಂಕ್ ಖರ್ಗೆ ನಿರ್ದೇಶನದ ಮೇರೆಗೆ ರಾಜ್ಯ ಪೊಲೀಸ್ ಮಹಾನಿರ್ದೇಶಕರು (ಡಿಜಿ ಮತ್ತು ಐಜಿಪಿ) ರಾಜ್ಯದ ಎಲ್ಲ ಪೊಲೀಸ್ ಆಯುಕ್ತರು, ಪೊಲೀಸ್ ಮಹಾನಿ–ರೀಕ್ಷಕರು, ಉಪ ಮಹಾನಿರೀಕ್ಷಕರು ಹಾಗೂ ಜಿಲ್ಲಾ ಪೊಲೀಸ್ ಅಧೀಕ್ಷಕರಿಗೆ ಸಮಗ್ರ ಸುತ್ತೋಲೆ ಹೊರಡಿಸಿದ್ದಾರೆ.**





ಅಕ್ರಮ ಮರಳು ಗಣಿಗಾರಿಕೆ ಪರಿಸರಕ್ಕೆ ಹಾನಿ ಉಂಟುಮಾಡುವುದಲ್ಲದೆ, ಕಾನೂನು ಸುವ್ಯವಸ್ಥೆ ಮತ್ತು ಸರಕಾರದ ಆದಾಯಕ್ಕೂ ಧಕ್ಕೆ ತರುತ್ತಿದೆ. ಇಂತಹ ಅಕ್ರಮ ಚಟುವಟಿಕೆಗಳನ್ನು ಯಾವುದೇ ಕಾರಣಕ್ಕೂ ಸಹಿಸದ 'ಶೂನ್ಯ ಸಹಿಷ್ಣುತೆ' ನೀತಿಯನ್ನು ಸರಕಾರ ಅನುಸರಿಸುತ್ತಿದ್ದು, ರಾಜ್ಯಾದ್ಯಂತ ಕಟ್ಟುನಿಟ್ಟಿನ ಜಾರಿಯನ್ನು ಖಚಿತಪಡಿಸಲು ಈ ಸುತ್ತೋಲೆ ಹೊರಡಿಸಲಾಗಿದೆ.ಸುತ್ತೋಲೆಯಲ್ಲಿ ಜಿಲ್ಲೆ ಹಾಗೂ ತಾಲ್ಲೂಕು ಮಟ್ಟದಲ್ಲಿ ಈಗಾಗಲೇ ರಚಿಸಲಾಗಿರುವ ಟಾಸ್ಕ್ ಫೋರ್ಸ್‌ಗಳನ್ನು ಪರಿಣಾಮಕಾರಿಯಾಗಿ ಕಾರ್ಯನಿರ್ವಹಿಸುವಂತೆ ಸೂಚಿಸಲಾಗಿದೆ.

ಅಕ್ರಮ ಮರಳು ಗಣಿಗಾರಿಕೆ ನಡೆಯುವ ಪ್ರದೇಶಗಳನ್ನು ಗುರುತಿಸಿ ನಿರಂತರ ನಿಗಾ ವಹಿಸುವುದು, ಅಕ್ರಮ ಸಾಗಾಣಿಕೆ ಮತ್ತು ಸಂಗ್ರಹಣೆಯನ್ನು ತಡೆಯುವುದು ಹಾಗೂ ಕಾನೂನು ಕ್ರಮ ಕೈಗೊಳ್ಳುವುದು ಸಂಬಂಧಿತ ಪೊಲೀಸ್ ಅಧಿಕಾರಿಗಳ ಜವಾಬ್ದಾರಿಯಾಗಿದೆ ಎಂದು ಸ್ಪಷ್ಟಪಡಿಸಲಾಗಿದೆ. ರಾಜ್ಯದ ಗಡಿ ಪ್ರದೇಶಗಳು ಸೇ–ರಿದಂತೆ ಅಂತರರಾಜ್ಯ ಮಾರ್ಗಗಳಲ್ಲಿ ಅಕ್ರಮ ಮರಳು ಸಾಗಾಣಿಕೆಯನ್ನು ತಡೆಗಟ್ಟಲು ಗಣಿ ಮತ್ತು ಭೂವಿಜ್ಞಾನ ಇಲಾಖೆ, ಕಂದಾಯ ಇಲಾಖೆ ಹಾಗೂ ಅರಣ್ಯ ಇಲಾಖೆಯೊಂದಿಗೆ ಸಮನ್ವಯ ಸಾಧಿಸಿ ಕಾರ್ಯನಿರ್ವಹಿಸುವಂತೆ ಸೂಚಿಸಲಾಗಿದೆ. ತನಿಖಾ ಕೇಂದ್ರಗಳು ಸಮರ್ಪಕವಾಗಿಕಾರ್ಯ ನಿರ್ವಹಿಸುತ್ತಿರುವುದನ್ನು ಖಚಿತಪಡಿಸಿಕೊಳ್ಳಲು ಹಾಗೂ ಅಗತ್ಯ ಮೂಲಸೌಕರ್ಯಗಳ ಕೊರತೆ ಕಂಡುಬಂದರೆ ಸಂಬಂಧಿತ ಇಲಾಖೆಯ ಗಮನಕ್ಕೆ ತರುವಂತೆ ನಿರ್ದೇಶಿಸಲಾಗಿದೆ.

ಪ್ರತಿ ಪೊಲೀಸ್ ಘಟಕವು ತನ್ನ ವ್ಯಾಪ್ತಿಯಲ್ಲಿರುವ ಅಕ್ರಮ ಮರಳು ಚಟುವಟಿಕೆಗಳ ಬಗ್ಗೆ ಗುಪ್ತಚರ ಮಾಹಿತಿ ಸಂಗ್ರಹಿಸಿ, ಅಗತ್ಯವಿದ್ದಲ್ಲಿ ದಿಢೀರ್ ದಾಳಿ ನಡೆಸಬೇಕು. ಈ ಅಕ್ರಮ ದಂಧೆಯಲ್ಲಿ ನಿರಂತರವಾಗಿ ತೊಡಗಿರುವವರ ವಿರುದ್ಧ ಗೂಂಡಾ ಕಾಯ್ದೆಯಡಿ ಕ್ರಮ ಕೈಗೊಳ್ಳುವಂತೆಯೂ ಸುತ್ತೋಲೆಯಲ್ಲಿ ಸೂಚಿಸಲಾಗಿದೆ. ಪ್ರತಿ ತಿಂಗಳ ಅಪರಾಧ ಪರಿಶೀಲನಾ ಸಭೆಯಲ್ಲಿ ಅಕ್ರಮ ಮರಳು ಗಣಿಗಾರಿಕೆ, ಸಾಗಾಣಿಕೆ ಹಾಗೂ ಸಂಗ್ರಹಣೆ ಪ್ರಕರಣಗಳ ಕುರಿತು ಠಾಣಾವಾರು ಪರಿಶೀಲನೆ ನಡೆಸಿ, ಅಧೀನ ಅಧಿಕಾರಿಗಳಿಗೆ ಅಗತ್ಯ ಸೂಚನೆಗಳನ್ನು ನೀಡಬೇಕು. ಅಲ್ಲದೆ, ಜಿಲ್ಲಾ ಮತ್ತು ತಾಲ್ಲೂಕು ಮಟ್ಟದ ಟಾಸ್ಕ್ ಫೋರ್ಸ್ ಸಭೆಗಳನ್ನು ನಿಯಮಿತವಾಗಿ ನಡೆಸಿ ಎಲ್ಲ ಇಲಾಖೆಗಳ ಸಮನ್ವಯದೊಂದಿಗೆ ಅಕ್ರಮ ಚಟುವಟಿಕೆಗಳನ್ನು ನಿಯಂತ್ರಿಸಲು ಕ್ರಮ ಕೈಗೊಳ್ಳುವಂತೆ ನಿರ್ದೇಶಿಸಲಾಗಿದೆ.

ಯಾವುದೇ ಪೊಲೀಸ್ ಘಟಕವು ತನ್ನ ವ್ಯಾಪ್ತಿಯಲ್ಲಿ ಅಕ್ರಮ ಮರಳು ಗಣಿಗಾರಿಕೆ ಹಾಗೂ ಸಾಗಾಣಿಕೆಯನ್ನು ತಡೆಯುವಲ್ಲಿ ವಿಫಲವಾದರೆ, ಸಂಬಂಧಿತ ಅಧಿಕಾರಿಗಳ ವಿರುದ್ಧ ಶಿಸ್ತು ಕ್ರಮ ಕೈಗೊಳ್ಳಲಾಗುವುದು ಎಂದು ಸುತ್ತೋಲೆಯಲ್ಲಿ ಎಚ್ಚರಿಕೆ ನೀಡಲಾಗಿದೆ. ಅಕ್ರಮ ಚಟುವಟಿಕೆ ಸಹಿಸುವುದಿಲ್ಲ: ಅಕ್ರಮ ಮರಳು ಗಣಿಗಾರಿಕೆ ಮತ್ತು ಸಾಗಾಣಿಕೆ ರಾಜ್ಯದ ನೈಸರ್ಗಿಕ ಸಂಪತ್ತಿನ ಲೂಟಿ ಮಾತ್ರವಲ್ಲ, ಇದು ಕಾನೂನು ಸುವ್ಯವಸ್ಥೆ ಹಾಗೂ ಸಾರ್ವಜನಿಕ ಹಿತಾಸಕ್ತಿಗೆ ಸವಾಲು ಎಸೆಯುವ ಗಂಭೀರ ಅಪರಾಧವಾಗಿದೆ. ಸರಕಾರ ಯಾವುದೇ ಅಕ್ರಮ ಚಟುವಟಿಕೆಯನ್ನು ಸಹಿಸುವುದಿಲ್ಲ.

## ಸಾಹಿತ್ಯ ಸಿಂಚನ

### ತಾಯಿಯ ಮಮತೆ

ತಾಯಿಯ ಮಮತೆ ಅಮೃತಧಾರೆ,
ಜೀವನದ ದಾರಿಯ ಬೆಳಕಿನ ತಾರೆ.
ಅವಳ ಮಡಿಲು ಸ್ವರ್ಗದ ಸಿರಿ,
ಅವಳ ಪ್ರೀತಿ ಎಂದೆಂದಿಗೂ ಚಿರಂತನ ಧ್ವನಿ.

ಕಣ್ಣೀರನ್ನು ಕಂಡರೆ ಕರಗುವ ಹೃದಯ,
ನಗುವನ್ನು ಕಂಡರೆ ಅರಳುವ ಮನ.
ತನ್ನ ಕನಸುಗಳನ್ನು ಬದಿಗಿಟ್ಟು,
ಮಕ್ಕಳ ಭವಿಷ್ಯವನ್ನೇ ಕಟ್ಟುವಳು.

ಅವಳ ತ್ಯಾಗಕ್ಕೆ ಅಳತೆ ಇಲ್ಲ,
ಅವಳ ಪ್ರೀತಿಗೆ ಮಿತಿಯೇ ಇಲ್ಲ.
ಹಗಲು–ರಾತ್ರಿ ಶ್ರಮಿಸಿ ಬೆಳೆಸುವಳು,
ಮಗುವಿನ ಗೆಲುವಿನಲ್ಲಿ ಸಂತಸ ಕಾಣುವಳು.

ತಾಯಿಯ ಮಾತು ಬದುಕಿನ ಪಾಠ,
ತಾಯಿಯ ಆಶೀರ್ವಾದ ಯಶಸ್ಸಿನ ದಾರಿ.
ತಪ್ಪು ಮಾಡಿದಾಗ ತಿದ್ದುವಳು,
ಒಳ್ಳೆಯ ದಾರಿಗೆ ನಡೆಸುವಳು.

ಅವಳ ಕೈಯ ಸ್ಪರ್ಶವೇ ಧೈರ್ಯ,
ಅವಳ ಮಡಿಲೇ ನೆಮ್ಮದಿಯ ನೆಲೆ.
ಅವಳ ನಗುವಿನಲ್ಲಿ ಮನೆಯ ಸಂತೋಷ,
ಅವಳ ಕಾಳಜಿಯಲ್ಲಿ ಬದುಕಿನ ಸೌಂದರ್ಯ.

ತಾಯಿಯ ಪ್ರೀತಿ ಸಾಗರಕ್ಕಿಂತ ಆಳ,
ಆಕಾಶಕ್ಕಿಂತ ವಿಶಾಲ.
ಭೂಮಿಗಿಂತ ಸಹನೆಯ ಮೂರ್ತಿ,
ದೇವರಿಗಿಂತ ಕರುಣೆಯ ರೂಪ.

ತಾಯಿಯ ಋಣ ತೀರಿಸಲಾಗದು,
ಅವಳ ತ್ಯಾಗ ಮರೆಯಲಾಗದು.
ಪ್ರತಿ ಉಸಿರಿನಲ್ಲೂ ಅವಳ ನೆನಪು,
ಪ್ರತಿ ಹೆಜ್ಜೆಯಲ್ಲೂ ಅವಳ ಆಶೀರ್ವಾದ.

ತಾಯಿಯ ಮಮತೆ ಶಾಶ್ವತ ಸಂಪತ್ತು,
ಜೀವನದ ಅಮೂಲ್ಯ ನಿಧಿ.
ತಾಯಿಯನ್ನು ಪ್ರೀತಿಸೋಣ, ಗೌರವಿಸೋಣ,
ಅವಳ ಮಮತೆಯ ಋಣವನ್ನು ಸದಾ ಸ್ಮ–
ರಿಸೋಣ.

–ಶ್ರೀಮತಿ ಕವಿತಾ ಹಿರೇಮಠ್

# ಚಲನಚಿತ್ರೋತ್ಸವ ಯಶಸ್ವಿಗೊಳಿಸಿ–ಡಾ.ಕಲ್ಮೇಶ ಹಾವೇರಿಪೇಠ

**ನೈಜ್ಯ ದೆಸೆ ನ್ಯೂಸ್**

**ಧಾರವಾಡ: ಉತ್ತರ ಕರ್ನಾಟಕ ಚಲನಚಿತ್ರ ವಾಣಿಜ್ಯ ಮಂಡಳಿ(ರಿ)ಯಿಂದ ಅಗಷ್ಟ 22 ಮತ್ತು 23 ರಂದು ನಡೆಯಲಿರುವ ಅಂತರಾಷ್ಟ್ರೀಯ ಚಲನಚಿತ್ರೋತ್ಸವ–2026ರಲ್ಲಿ ನಮ್ಮ ಮಂಡಳಿಯ ನಿರ್ಮಾಪಕರು, ನಿರ್ದೇಶಕರು, ಚಲನಚಿತ್ರದ ಕಲಾವಿದರು, ತಂತ್ರಜ್ಞರು ಆಸಕ್ತಿಯಿಂದ ಭಾಗವಹಿಸುವ ಮೂಲಕ ಚಲನಚಿತ್ರೋತ್ಸವವನ್ನು ಯಶಸ್ವಿಗೊಳಿಸಬೇಕೆಂದು ಉ.ಕ.ಚಲನಚಿತ್ರ ವಾಣಿಜ್ಯ ಮಂಡಳಿಯ ಕಾರ್ಯಾಧ್ಯಕ್ಷ ಡಾ.ಕಲ್ಮೇಶ ಹಾವೇರಿಪೇಠ ಹೇಳಿದರು.**

ಅವರು ಉ.ಕ.ಚಲನಚಿತ್ರ ವಾಣಿಜ್ಯ ಮಂಡಳಿಯಲ್ಲಿ ನಡೆದ ಅಂತರಾಷ್ಟ್ರೀಯ ಚಲನಚಿತ್ರೋತ್ಸವ ಪೂರ್ವಭಾವಿ ಸಭೆ ಹಾಗೂ ಸದಸ್ಯತ್ವ ನೋಂದಣಿ ಅಭಿಯಾನ ಕಾರ್ಯಕ್ರಮದಲ್ಲಿ ಮಾತನಾಡಿದರು. ಈ ಸಂದರ್ಭದಲ್ಲಿ ಕಾರ್ಯಕಾರಿ ಸಮಿತಿಗಳ ರಚನೆ, ಜವಾಬ್ದಾರಿಗಳ ಹಂಚಿಕೆ ಮತ್ತು ಮುಂದಿನ ಕಾರ್ಯಯೋಜನೆಗಳ ಕುರಿತು ಚರ್ಚೆ ಮಾಡಲಾಯಿತು. ಅಧ್ಯಕ್ಷತೆ ವಹಿಸಿದ್ದ



ಮಂಡಳಿಯ ಅಧ್ಯಕ್ಷ ಮಂಜುನಾಥ ಹಗೇದಾರ ಮಾತನಾಡಿ ಮಂಡಳಿ ಕ್ರಿಯಾಶೀಲವಾಗಿ ಇರಲು ಪ್ರತಿಯೊಬ್ಬರ ಸಹಕಾರ ಅಗತ್ಯ. ಬರಿ ಪದಾಧಿಕಾರಿಗಳಿಂದ ಕಾರ್ಯ ಮಾಡಲಾಗದು. ನಾಲ್ಕನೂರಕ್ಕೂ ಹೆಚ್ಚು ನಿರ್ಮಾಪಕರು ನಮ್ಮ ಸಂಘದಲ್ಲಿದ್ದು ಅವರು ಚಿತ್ರ ನಿರ್ಮಾಣ ಮಾಡಲು ನಮ್ಮ ಮಂಡಳಿ ಎಲ್ಲ ರೀತಿಯ ಸಹಕಾರ ನೀಡಲಿದೆ. ಈಗಾಗಲೇ ಕೆಲವರು ಚಿತ್ರ ನಿರ್ಮಾಣದಲ್ಲೂ ತೊಡಗಿದ್ದಾರೆ. ನಮ್ಮ ಸಂಘದ ನೊಂದಾಯಿತ ಸದಸ್ಯರಿಗೆ ಚಿತ್ರಗಳಲ್ಲಿ ಹೆಚ್ಚಿನ ಅವಕಾಶ ನೀಡಲಾಗುತ್ತಿದೆ ಎಂದರು.

ಚಲನಚಿತ್ರ ಸಹನಿರ್ದೇಶಕ ದೀಪಕ, ಇಂಡಿಯ ನಿರ್ದೇಶಕ ಶಾಂತಕುಮಾರ ಪಾಟೀಲ, ಕಲಾವಿದ ಜ್ಯೂ.ರಾಜಕುಮಾರ ಪ್ರಕಾಶ ರಾಜಕುಮಾರ ಬಡ್ನಿ, ದ್ಯಾಪೂರ ಸರ್, ರಾಜೀವಸಿಂಗ್ ಹಲವಾಯಿ, ಪ್ರೇಮಾ ನಡುವಿನಮನಿ, ವಿಕ್ರಮ್ ಕುಮಠಾ, ಜ್ಯೂ ಉಪೇಂದ್ರ ಬಾಬು ಮತ್ತು ವಿಜಯಪೂರ, ಬಾಗಲಕೋಟ, ಬೆಳಗಾವಿ, ಇಂಡಿ ಮೊದಲಾದ ಕಡೆಯಿಂದ ಆಗಮಿಸಿದ ನಿರ್ಮಾಪಕರು, ನಿರ್ದೇಶಕರು, ಕಲಾವಿದರು, ತಂತ್ರಜ್ಞರು ತಮ್ಮ ಸಲಹೆ ನೀಡಿ ಅಭಿಪ್ರಾಯಗಳನ್ನು ಹಂಚಿಕೊಂಡರು. ಮಂಡಳಿಯಿಂದ ಏನೆಲ್ಲ ಸೌಲಭ್ಯ ಒದಗಿಸಲಾಗುತ್ತದೆ ಎಂಬುದನ್ನು ಕುರಿತು ಪ್ರಧಾನಕಾರ್ಯದರ್ಶಿ ರಾಹುಲ್ ದತ್ತಪ್ರಸಾದ ಹೇಳಿದರು.

ಇದೇ ಸಂದರ್ಭದಲ್ಲಿ ಅವರ ಹುಟ್ಟುಹಬ್ಬವನ್ನು ಮಂಡಳಿಯಲ್ಲಿ ಕೇಕ್ ಕತ್ತರಿಸುವ ಮೂಲಕ ಆಚರಿಸಿ ಶುಭ ಕೋರಲಾಯಿತು. ಸಲಹಾ ಮಂಡಳಿ ಸದಸ್ಯರಾದ ಅನಿಶ್ ಭರೂದವಾಲೆ, ಮಮ್ಮಿಗಟ್ಟಿ , ಡಾ.ಪ್ರಭು ಗಂಜಿಹಾಳ , ಚಿತ್ರೋತ್ಸವ ಕುರಿತು ಮಾತನಾಡಿದರು. ವೇದಿಕೆಯಲ್ಲಿ ಚಲನಚಿತ್ರ ಮಂಡಳಿಯ ಪದಾಧಿಕಾರಿಗಳು ಉಪಸ್ಥಿತ–ರಿದ್ದರು. ಉಪಾಧ್ಯಕ್ಷ ಪ್ರಭು ಹಂಚಿನಾಳ ಪ್ರಾಸ್ತವಿಕ ಜೊತೆಗೆ ಕಾರ್ಯಕ್ರಮ ನಿರೂಪಿಸಿದರು. ಕೊನೆಯಲ್ಲಿ ಚಲನಚಿತ್ರ ನಿರ್ದೇಶಕ ಅರವಿಂದ ಮುಳಗುಂದ ವಂದಿಸಿದರು.


–ಡಾ.ಪ್ರಭು ಗಂಜಿಹಾಳ

# ರಾಯಚೂರು ರಿಮ್ಸ್ ಆಸ್ಪತ್ರೆಯಲ್ಲಿ ಜೀವಾವಧಿ ಶಿಕ್ಷೆ ಅನುಭವಿಸುತ್ತಿದ್ದ ಖೈದಿ ಆತ್ಮಹತ್ಯೆ

**ನೈಜ್ಯ ದೆಸೆ ನ್ಯೂಸ್**

**ರಾಯಚೂರು: ಕೊಲೆ ಪ್ರಕರಣದಲ್ಲಿ ಶಿಕ್ಷೆಗೆ ಒಳಗಾಗಿ ಜೀವಾವಧಿ ಶಿಕ್ಷೆ ಅನುಭವಿಸುತ್ತಿದ್ದ ಖೈದಿಯೊಬ್ಬರು ರಾಯಚೂ–ರಿನ ರಿಮ್ಸ್ (RIMS) ಆಸ್ಪತ್ರೆಯಲ್ಲಿ ಆತ್ಮಹತ್ಯೆ ಮಾಡಿಕೊಂಡಿರುವ ದುರ್ಘಟನೆ ನಡೆದಿದೆ.**

ಮೃತ ಖೈದಿಯನ್ನು ಪವನ್ ಕುಮಾರ್ ಎಂದು ಗುರುತಿಸಲಾಗಿದೆ. ಅವರು ಕೆಲ ದಿನಗಳಿಂದ ತೀವ್ರ ಅನಾರೋಗ್ಯದಿಂದ ಬಳಲುತ್ತಿದ್ದು, ಹೆಚ್ಚಿನ ಚಿಕಿತ್ಸೆಗಾಗಿ ಜುಲೈ 22ರಂದು ರಾಯಚೂರಿನ ರಿಮ್ಸ್ ಆಸ್ಪತ್ರೆಗೆ ದಾಖಲಿಸಲಾಗಿ–ತ್ತು. ಆಸ್ಪತ್ರೆಯ ಖೈದಿಗಳಿಗಾಗಿ ಮೀಸಲಾದ ವಿಶೇಷ ವಾರ್ಡ್‌ನಲ್ಲಿ ಚಿಕಿತ್ಸೆ ಪಡೆಯುತ್ತಿದ್ದರು. ವೈದ್ಯಕೀಯ ಮಾಹಿತಿಯ ಪ್ರಕಾರ, ಪವನ್



ಕುಮಾರ್ ಅವರಿಗೆ ಕ್ಷಯರೋಗ (ಟಿಬಿ) ಹಾಗೂ ಅನ್ನನಾಳದಲ್ಲಿ ರಕ್ತಸ್ರಾವ ಸೇ–ರಿದಂತೆ ಗಂಭೀರ ಆರೋಗ್ಯ ಸಮಸ್ಯೆಗಳಿದ್ದವು.

ದೀರ್ಘಕಾಲದ ಅನಾರೋಗ್ಯದಿಂದ ಮಾನಸಿಕವಾಗಿ ಕುಗ್ಗಿ ಆತ್ಮಹತ್ಯೆಗೆ ಶರಣಾಗಿರಬಹುದೆಂಬ ಶಂಕೆಯನ್ನು ಪೊಲೀಸರು ಪ್ರಾಥಮಿಕ ತನಿಖೆಯ ಆದ– ಾರದ ಮೇಲೆ ವ್ಯಕ್ತಪಡಿಸಿದ್ದಾರೆ. ಆತ್ಮಹತ್ಯೆಗೆ ನಿಖರ ಕಾರಣವೇನು ಎಂಬುದು ತನಿಖೆ ಪೂರ್ಣಗೊಂಡ ಬಳಿಕವೇ ತಿಳಿದುಬರಲಿದೆ.

ಘಟನೆಯ ದಿನ ಪವನ್ ಕುಮಾರ್ ಶೌಚಾಲಯಕ್ಕೆ ತೆರಳಿದ್ದರು. ಬಹಳ ಸಮಯವಾದರೂ ಅವರು ಹೊರಬರದ ಹಿನ್ನೆಲೆಯಲ್ಲಿ ವಾರ್ಡ್ ಸಿಬ್ಬಂದಿಗೆ ಅನುಮಾನ ಮೂಡಿದೆ. ತಕ್ಷಣವೇ ಭದ್ರತಾ ಸಿಬ್ಬಂದಿ ಹಾಗೂ ಆಸ್ಪತ್ರೆಯ ಅಧಿಕಾರಿಗಳಿಗೆ ಮಾಹಿತಿ ನೀಡಲಾಗಿದೆ. ನಂತರ ಶೌಚಾಲಯದ ಬಾಗಿಲು ತೆರದು ಪರಿಶೀಲಿಸಿದಾಗ, ಅವರು ನೇಣು ಬಿಗಿದುಕೊಂಡ ಸ್ಥಿತಿಯಲ್ಲಿ ಪತ್ತೆಯಾಗಿದ್ದಾರೆ. ಘಟನೆಯ ಮಾಹಿತಿ ದೊರೆಯುತ್ತಿದ್ದಂತೆ ಪೊಲೀಸರು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದರು. ಮೃತದೇಹವನ್ನು ಮರಣೋತ್ತರ ಪರೀಕ್ಷೆಗೆ ರವಾನಿಸಲಾಗಿದ್ದು, ವರದಿ ಬಂದ ಬಳಿಕ ಸಾವಿನ ನಿಖರ ಕಾರಣ ಸ್ಪಷ್ಟವಾಗುವ ನಿರೀಕ್ಷೆಯಿದೆ. ಆಸ್ಪತ್ರೆಯ ವಿಶೇಷ ವಾರ್ಡ್‌ನಲ್ಲಿ ಚಿಕಿತ್ಸೆ ಪಡೆಯುತ್ತಿದ್ದ ಖೈದಿಯೊಬ್ಬರು ಆತ್ಮಹತ್ಯೆ ಮಾಡಿಕೊಂಡಿರುವ ಘಟನೆ ಭದ್ರತಾ ವ್ಯವಸ್ಥೆ ಹಾಗೂ ಮೇಲ್ವಿಚಾರಣೆ ಕುರಿತ ಪ್ರಶ್ನೆಗಳನ್ನು ಹುಟ್ಟುಹಾಕಿದೆ. ಘಟನೆಯ ಕುರಿತು ಸಂಬಂಧಿತ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ಆತ್ಮಹತ್ಯೆಗೆ ಕಾರಣವಾದ ಪರಿಸ್ಥಿತಿಗಳು, ಭದ್ರತಾ ಲೋಪವಿದೆಯೇ ಹಾಗೂ ಇತರೆ ಎಲ್ಲಾ ಆಯಾಮಗಳ ಕುರಿತು ಪೊಲೀಸರು ಸಮಗ್ರ ತನಿಖೆ ನಡೆಸುತ್ತಿದ್ದಾರೆ. ಪೊಲೀಸರ ತನಿಖೆ ಪೂರ್ಣಗೊಂಡ ನಂತರ ಘಟನೆಯ ಕುರಿತು ಹೆಚ್ಚಿನ ಮಾಹಿತಿ ಲಭ್ಯವಾಗುವ ಸಾಧ್ಯತೆ ಇದೆ.

# 40–50 ವರ್ಷಗಳಿಂದ ವಾಸವಿರುವ ಬಡ ಕೂಲಿಕಾರರ ಒಕ್ಕಲೆಬ್ಬಿಸುವ ನೀರಾವರಿ ಇಲಾಖೆಯ ಧೋರಣೆ ಖಂಡನೀಯ : ಸುರೇಶ್ ಗೊಬ್ಬರಕಲ್

**ನೈಜ್ಯ ದೆಸೆ ನ್ಯೂಸ್**

**ಸಿಂಧನೂರು: ರಾಯಚೂರು ಜಿಲ್ಲೆಯ ಸಿಂಧನೂರು ತಾಲೂಕಿನ ಗೊರೆಬಾಳದಿಂದ ವೆಂಕಟೇಶ್ವರ ಕ್ಯಾಂಪ್ (ಪೈ ಕ್ಯಾಂಪ್) ವರೆಗಿನ ರಸ್ತೆ ಡಾಂಬರೀಕರಣ ಕಾಮಗಾ–ರಿಯ ಹೆಸರಿನಲ್ಲಿ, ತುಂಗಭದ್ರಾ ಎಡದಂಡೆ ಕಾಲುವೆ 36ನೇ ಮಧ್ಯಭಾಗದಲ್ಲಿ ಕಳೆದ 40–50 ವರ್ಷಗಳಿಂದ ಶೆಡ್ಡುಗಳನ್ನು ನಿರ್ಮಿಸಿಕೊಂಡು ಬದುಕು ಕಟ್ಟಿಕೊಂಡಿರುವ ಬಡ ಕೂಲಿಕಾರರನ್ನು ಯಾವುದೇ ಪುನರ್ವಸತಿ ಕಲ್ಪಿಸದೆ ಒಕ್ಕಲೆಬ್ಬಿಸಲು ನೀರಾವರಿ ಇಲಾಖೆ ನೋಟಿಸ್ ನೀಡಿರುವುದನ್ನು ಕರ್ನಾಟಕ ರಕ್ಷಣಾ ವೇದಿಕೆ (ಹೆಚ್. ಶಿವರಾಮೇಗೌಡ ಬಣ) ತಾಲೂಕು ಘಟಕವು ತೀವ್ರವಾಗಿ ಖಂಡಿಸಿದೆ.**

'ಈ ಕುರಿತಂತೆ ಇಂದು ಕರವೇ ಸಿಂಧನೂರು ತಾಲೂಕು ಅಧ್ಯಕ್ಷ ಜಿ. ಸುರೇಶ್ ಗೊಬ್ಬರಕಲ್ ನೇತೃತ್ವದಲ್ಲಿ ರಾಯಚೂರು ಜಿಲ್ಲಾಧಿಕಾರಿಗಳಿಗೆ ಮನವಿ ಸಲ್ಲಿಸಲಾಗಿದ್ದು, ಬಡ ಕೂಲಿ ಕಾರ್ಮಿಕರ ರಕ್ಷಣೆಗಾಗಿ ಆಗ್ರಹಿಸಲಾಗಿದೆ.

**ಬೇಡಿಕೆಗಳು:** ಪಂಚಾಯಿತಿ ಸೌಲಭ್ಯಗಳಿದ್ದರೂ



ಅನಧಿಕೃತ ಎನ್ನುವುದು ಅನ್ಯಾಯ: ಇಲ್ಲಿ ವಾಸವಿರುವ ಬಡ ಕುಟುಂಬಗಳಿಗೆ ಗ್ರಾಮ ಪಂಚಾಯಿತಿಯಿಂದಲೇ ವಿದ್ಯುತ್, ಕುಡಿಯುವ ನೀರು ಹಾಗೂ ಶೌಚಾಲಯ ನಿರ್ಮಿಸಿಕೊಡಲಾಗಿದೆ. ಅಲ್ಲದೆ ನಿಯಮಿತವಾಗಿ ತೆರಿಗೆಯನ್ನೂ ಪಾವತಿಸುತ್ತಿರುವಾಗ, ಇವರನ್ನು 'ಅನಧಿಕೃತ' ಎಂದು ಬಿಂಬಿಸಿ ಒಕ್ಕಲೆಬ್ಬಿಸಲು ಹೊರಟಿರುವುದು ಕಾನೂನು ಬಾಹಿರವಾಗಿದೆ.

**ಜೆಸಿಬಿ ಬೆದರಿಕೆ ಖಂಡನೀಯ:** ಕೇವಲ ಮೂರು ದಿನಗಳ ಗಡುವು ನೀಡಿ ಜೆಸಿಬಿ ಮೂಲಕ ಶೆಡ್‌ಗಳನ್ನು ಧ್ವಂಸಗೊಳಿಸುವುದಾಗಿ ನೀರಾವರಿ ಇಲಾಖೆಯ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಎಚ್ಚರಿಕೆ ನೀಡಿರುವುದು ಬಡವರನ್ನು ಬೀದಿಗೆ ತಳ್ಳುವ ಹುನ್ನಾರವಾಗಿದೆ.

**ಹಿಂದಿನ ಪ್ರತಿಭಟನೆಗಳ ನಿರ್ಲಕ್ಷ್ಯ:** ಈಗಾಗಲೇ ಜೂನ್ 30, 2026 ರಂದು ಗಾಂಧಿನಗರದ ಗಾಂಧಿ ವೃತ್ತದಲ್ಲಿ ಕರವೇ ವತಿಯಿಂದ ರಸ್ತಾ ರೋಕೋ ಮತ್ತು ಧರಣಿ ಸತ್ಯಾಗ್ರಹ ನಡೆಸಿ ಮನವಿ ಸಲ್ಲಿಸಿದ್ದರೂ, ಆಡಳಿತ ಯಂತ್ರವು ಪುನಃ ಜುಲೈ 21 ರಂದು ಮತ್ತೊಮ್ಮೆ ನೋಟಿಸ್ ಜಾರಿ ಮಾಡಿರುವುದು ಖಂಡನಾರ್ಹ. ಬಡ ಕೂಲಿಕಾರರನ್ನು ಬಲವಂತವಾಗಿ ಒಕ್ಕಲೆಬ್ಬಿಸುವ ಮುನ್ನ ಸರ್ಕಾರವು ಅವ–ರಿಗೆ ಶಾಶ್ವತ ಪುನರ್ವಸತಿ ಕಲ್ಪಿಸಬೇಕು ಮತ್ತು ಹಕ್ಕುಪತ್ರಗಳನ್ನು ವಿತರಿಸಬೇಕು. ಇದನ್ನು ಮಾಡದೆ ಯಂತ್ರಗಳ ಸಹಾಯದಿಂದ ಬಡವರ ಮೇಲೆ ದೌರ್ಜನ್ಯ ಎಸಗಲು ಮುಂದಾದರೆ, ಕೂಲಿಕಾರರು ಹಾಗೂ ಅವರ ಕುಟುಂಬದವರು ತೀವ್ರ ಸ್ವರೂಪದ ಪ್ರತಿಭಟನೆಗೆ ಅಥವಾ ಅಪಾಯಕಾರಿ ನಿರ್ಧಾರಕ್ಕೆ ಮುಂದಾಗಲಿದ್ದಾರೆ. ಯಾವುದೇ ಅಹಿತಕರ ಘಟನೆಗಳು ಸಂಭವಿಸಿದರೆ ಸಂಪೂರ್ಣ ಆಡಳಿತ ಯಂತ್ರವೇ ಹೊಣೆಯಾಗಲಿದೆ ಎಂದು ಕರವೇ ಎಚ್ಚರಿಸಿದೆ.

# ಸತತ ಏರಿಕೆಯ ನಂತರ ಮತ್ತೆ ಕುಸಿದ ಚಿನ್ನ–ಬೆಳ್ಳಿ ಬೆಲೆ

**ನೈಜ್ಯ ದೆಸೆ ನ್ಯೂಸ್**

**ಬೆಂಗಳೂರು: ನಿರಂತರ ಮೂರು ದಿನಗಳ ಏರಿಕೆಯ ನಂತರ ಮತ್ತೆ ಚಿನ್ನ–ಬೆಳ್ಳಿ ದರಗಳು ಕುಸಿತ ಕಂಡಿವೆ. ಕಳೆದ ಹತ್ತು ದಿನಗಳಲ್ಲೇ ಕಡಿಮೆ ದರಕ್ಕೆ ಚಿನ್ನ ಇಳಿಕೆಯಾಗಿದೆ. ಲಭ್ಯವಿರುವ ಮಾರುಕಟ್ಟೆ ಮಾಹಿತಿ ಪ್ರಕಾರ ಬೆಳ್ಳಿ ಒಂದು ಕೆ.ಜಿ.ಗೆ 5 ಸಾವಿರ ರೂಪಾಯಿ ಇಳಿಕೆಯಾಗಿದ್ದು, 2.35 ಲಕ್ಷ ರೂಪಾಯಿಯಷ್ಟಿದೆ. ಅದೇ ರೀತಿ ಚಿನ್ನವೂ ಇಳಿಕೆಯಾಗಿದೆ.**



ಜು.19ರಂದು 24 ಕ್ಯಾರೆಟ್‌ನ ಒಂದು ಗ್ರಾಂ ಚಿನ್ನವು 14,329 ರೂ. ನಷ್ಟಿತ್ತು. ಅನಂತರ ದರದಲ್ಲಿ ಏರಿಳಿತವಾಗಿ ಇಂದು ಬೆಳಿಗ್ಗೆ 24 ಕ್ಯಾರೆಟ್‌ನ ಒಂದು ಗ್ರಾಂ ಚಿನ್ನವು 172 ರೂ. ನಷ್ಟು ಕಡಿಮೆಯಾಗಿದ್ದು, 14,417 ರೂ.ನಷ್ಟಿದೆ. 22 ಕ್ಯಾರೆಟ್‌ನ ಚಿನ್ನವು ಒಂದು ಗ್ರಾಂಗೆ 155ರೂ. ನಷ್ಟು ಇಳಿಕೆಯಾಗಿದ್ದು, 13,215 ರೂ.ಗೆ ತಲುಪಿದೆ. ಜು.19ರಂದು 13,150 ರೂ. ನಷ್ಟಿತ್ತು. ಇಂದು ಅದಕ್ಕಿಂತ 120 ರೂ. ಹೆಚ್ಚಿನ ದರವಿದೆ. 18 ಕ್ಯಾರೆಟ್‌ನ ಚಿನ್ನವು ಒಂದು ಗ್ರಾಂಗೆ 126 ರೂ. ನಷ್ಟು ಕಡಿಮೆಯಾಗಿದ್ದು, 10, 813 ರೂ. ನಷ್ಟಿದೆ. ಜುಲೈ 20 ರಿಂದ ಮೂರು ದಿನಗಳ ಕಾಲ ಸತತ ಏರಿಕೆಯಾಗಿದ್ದ ಚಿನ್ನವು ಜುಲೈ 23 ಮತ್ತು 24ರಂದು ಇಳಿಕೆಯಾಗಿತ್ತು, ಮತ್ತೆ ಜುಲೈ 25 ಹಾಗೂ 27 ರಂದು ಅಲ್ಪ ಪ್ರಮಾಣದಲ್ಲಿ ಏರಿಕೆಯಾಗಿತ್ತು. ಪ್ಲಾಟಿನಂ ದರದಲ್ಲಿ ಕುಸಿತವಾಗಿದ್ದು, 10 ಗ್ರಾಂಗೆ 720 ರೂ. ಕಡಿಮೆಯಾಗಿದ್ದು, 49,320 ರೂ. ನಷ್ಟಿದೆ. ಜುಲೈ 20, ಜುಲೈ 22ರಂದು ಏರಿಕೆಯಾಗಿದ್ದ ಬೆಳ್ಳಿಯು ಜು.24ರಂದು ಕುಸಿತವಾಗಿ ಮತ್ತು 25ರಂದು ಏರಿಕೆಯಾಗಿತ್ತು. ನಿನ್ನೆ ಸ್ಥಿರವಾಗಿದ್ದ ಬೆಳ್ಳಿಯ ದರವು ಇಂದು ಕೆ.ಜಿ.ಗೆ ಐದು ಸಾವಿರ ರೂ. ಕಡಿಮೆಯಾಗಿದ್ದು, 2.35 ಲಕ್ಷ ರೂಪಾಯಿಗೆ ತಲುಪಿದೆ. ಇತ್ತೀಚೆಗೆ ಚಿನ್ನ ಮತ್ತು ಬೆಳ್ಳಿಯ ದರಗಳು ಸ್ಥಿರವಾಗಿರದೇ ಪದೇ ಪದೇ ಏರಿಳಿತಕ್ಕೆ ಒಳಗಾಗುತ್ತಿವೆ. ಆದರೆ, ಕಳೆದ ವರ್ಷದಂತೆ ಭಾರಿ ಪ್ರಮಾಣದಲ್ಲಿ ಏರಿಕೆ ಅಥವಾ ಇಳಿಕೆಯಾಗುತ್ತಿಲ್ಲ.

# ಗ್ರಾಪಂ ಅನುದಾನ ದುರ್ಬಳಕೆ: ಪಿಡಿಒ, ಅಧ್ಯಕ್ಷ, ಸದಸ್ಯೆಗೆ ಮೂರು ವರ್ಷ ಜೈಲು ಶಿಕ್ಷೆ, ನ್ಯಾಯಾಲಯದ ತೀರ್ಪು ಪ್ರಕಟ

**ನೈಜ್ಯ ದೆಸೆ ನ್ಯೂಸ್**

**ವಿಜಯನಗರ / ಹೊಸಪೇಟೆ: ಇಂದಿರಾ ಆವಾಸ್ ಯೋಜನೆಯ ಅನುದಾನವನ್ನು ದುರ್ಬಳಕೆ ಮಾಡಿಕೊಂಡ ಪ್ರಕರಣದಲ್ಲಿ ವಿಜಯನಗರ ಜಿಲ್ಲೆಯ ಮರಬ್ಬಿಹಾಳು ಗ್ರಾಮ ಪಂಚಾಯಿತಿಯ ಪಿಡಿಒ, ಅಧ್ಯಕ್ಷ ಮತ್ತು ಸದಸ್ಯೆಗೆ ಮೂರು ವರ್ಷಗಳ ಜೈಲು ಶಿಕ್ಷೆ ಹಾಗೂ ತಲಾ 90,000 ರೂಪಾಯಿ ದಂಡ ವಿಧಿಸಿ ವಿಜಯನಗರ ಜಿಲ್ಲಾ ಪ್ರಧಾನ ಮತ್ತು ಸತ್ರ ನ್ಯಾಯಾಲಯವು**



ಮಂಗಳವಾರ ತೀರ್ಪು ಪ್ರಕಟಿಸಿದೆ.

ಮರಬ್ಬಿಹಾಳು ಗ್ರಾಮ ಪಂಚಾಯಿತಿಯ ಪಿಡಿಒ ವಸಂತರಾಜ್, ಗ್ರಾಪಂ ಸದಸ್ಯೆ ಹನುಮವ್ವ ಹಾಗೂ ಗ್ರಾಪಂ ಅಧ್ಯಕ್ಷ ರಾಮಚಂದ್ರ ನಾಯ್ಕ ಶಿಕ್ಷೆಗೆ ಒಳಗಾದ ಅಪರಾಧಿಗಳು. ಇವರು ಇಂದಿರಾ ಆವಾಸ್ ಯೋಜನೆಯ ಸರ್ಕಾರಿ ಅನುದಾನವನ್ನು ದುರ್ಬಳಕೆ ಮಾಡಿಕೊಂಡಿರುವುದು ತನಿಖೆಯಲ್ಲಿ ದೃಢಪಟ್ಟ ಹಿನ್ನೆಲೆಯಲ್ಲಿ ನ್ಯಾಯಾಲಯವು ಈ ಶಿಕ್ಷೆ ವಿಧಿಸಿದೆ.


ಈ ಪ್ರಕರಣಕ್ಕೆ ಸಂಬಂಧಿಸಿದಂತೆ ಲೋಕಾಯುಕ್ತ ಡಿವೈಎಸ್ಪಿ ಎನ್.ಆರ್. ಮಹಾಂತರಡ್ಡಿ ಅವರು ತನಿಖೆ ನಡೆಸಿ, ಭ್ರಷ್ಟಾಚಾರ ಪ್ರತಿಬಂಧಕ ಕಾಯ್ದೆ–1988ರ 22 0 420, ?? 13(1)(2), 13(2) 468, 471ರ ಅಡಿಯಲ್ಲಿ ನ್ಯಾಯಾಲಯಕ್ಕೆ ದೋಷಾರೋಪಣೆ ಪತ್ರ ಸಲ್ಲಿಸಿದ್ದರು. ಲೋಕಾಯುಕ್ತ ಸಂಸ್ಥೆಯ ಪರವಾಗಿ ವಿಶೇಷ ಸರ್ಕಾರಿ ಅಭಿಯೋಜ–ಕ (ಎಸ್‌ಪಿಪಿ) ಡಿ.ನಾರಾಯಣ ಅವರು ವಾದ ಮಂಡಿಸಿದ್ದರು. ವಾದ–ಪ್ರತಿವಾದ ಆಲಿಸಿದ ನ್ಯಾಯಾಲಯವು ಆರೋಪ ಸಾಬೀತಾದ ಹಿನ್ನೆಲೆಯಲ್ಲಿ ಅಪರಾಧಿಗಳಿಗೆ ಮೂರು ವರ್ಷ ಜೈಲು ಶಿಕ್ಷೆ ಹಾಗೂ ದಂಡ ವಿಧಿಸಿ ಆದೇಶಿಸಿದೆ.

# ನಿರಂತರ ನೀರು ಹರಿಸುವಂತೆ ಮತ್ತು ಐಸಿಸಿ (ICC) ಸಭೆಯನ್ನು ಕರೆಯುವಂತೆ : ಕ ರಾ ರೈತ ಸಂಘ ಹಾಗೂ ಹಸಿರು ಸೇನೆ ಒತ್ತಾಯ

**ನೈಜ್ಯ ದೆಸೆ ನ್ಯೂಸ್**

**ಲಿಂಗಸಗೂರು: ಪ್ರಸ್ತುತ ಕೃಷ್ಣಾ ನದಿಯ ಮೇಲ್ಭಾಗದಲ್ಲಿ ಉತ್ತಮ ಮಳೆಯಾಗುತ್ತಿದ್ದು ಕೃಷ್ಣಾ ಜಲ ನಿಗಮದ ವ್ಯಾಪ್ತಿಯ ಆಲಮಟ್ಟಿ ಜಲಾಶಯದಲ್ಲಿ 123 ಟಿಎಂಸಿ ಹಾಗೂ ನಾರಾಯಣಪುರ (ಬಸವಸಾಗರ) ಜಲಾಶಯದಲ್ಲಿ 37 ಟಿಎಂಸಿ ನೀರು ಸಂಗ್ರಹವಾಗಿ ಉಭಯ ಜಲಾಶಯಗಳು ಸಂಪೂರ್ಣವಾಗಿ ಭರ್ತಿಯಾಗಿವೆ. ಈಗಾಗಲೇ ಕುಡಿಯುವ ನೀರಿನ ಯೋಜನೆಗೆ ಎಲ್ಲಾ ಕೆರೆಗಳಿಗೆ ನೀರನ್ನು ಒದಗಿಸಲಾಗಿದೆ.**

ಪ್ರಸ್ತುತ ಜಲಾಶಯಗಳಿಗೆ ಒಳಹರಿವು ಹೆಚ್ಚಾಗಿದ್ದು, ಹೆಚ್ಚಿನ ನೀರನ್ನು ನದಿಗೆ ಹರಿಸಲಾಗುತ್ತಿದೆ ರೈತರ ಕೃಷಿ ಜಮೀನುಗಳಿಗೆ ಹಾಗೂ ರಾಂಪುರ ಏತ ನೀರಾವರಿ ಯೋಜನೆಗೆ ನಿರಂತರ ನೀರು ಹರಿಸುವ ಮತ್ತು ಐಸಿಸಿ (ICC) ಸಭೆಯನ್ನು ಕರೆಯುವಂತೆ ಕ ರಾ ರೈತ ಸಂಘ ಹಾಗೂ ಹಸಿರು ಸೇನೆಯ ತಾಲೂಕ ಅಧ್ಯಕ್ಷ ಸಂಗನಗೌಡ ಹೊಸೂರು ಕೃಷ್ಣಾ ಭಾಗ್ಯ ಜಲ ನಿಗಮ ನಿಯಮಿತ (KBJNL), NRBC/NLBC ಕಾರ್ಯನಿರ್ವಾಹಕ ಇಂಜಿನಿಯರ್ ರವರಿಗೆ ಮನವಿಯನ್ನು ಸಲ್ಲಿಸಿದರು .



ರಾಜ್ಯದ ಇತರ ಜಲಾಶಯಗಳಾದ ಕಾವೇರಿ ಮತ್ತು ಟಿ.ಬಿ. ಡ್ಯಾಂಗಳನ್ನು ಅವಲೋಕಿಸಿದಾಗ, ಅಲ್ಲಿ ಅರ್ಧದಷ್ಟು ನೀರು ತುಂಬಿದ ತಕ್ಷಣವೇ ರೈತರ ಕೃಷಿ ಜಮೀನುಗಳಿಗೆ ನಾಲೆಗಳ ಮೂಲಕ ನೀರನ್ನು ಹರಿಸಲಾಗುತ್ತದೆ.

ಆದರೆನಮ್ಮ ಭಾಗದಲ್ಲಿ ಎರಡೂ ಜಲಾಶಯಗಳು ಸಂಪೂರ್ಣ ತುಂಬಿ, ನೀರು ನದಿಗೆ ಪೋಲಾಗುತ್ತಿದ್ದರೂ ರೈತರ ಜಮೀನುಗಳಿಗೆ ನೀರು ಹರಿಸಲು ಅಧಿಕಾರಿಗಳು ಮತ್ತು ಜನಪ್ರತಿನಿಧಿಗಳು ಮೀನಾಮೇಷ ಎಣಿಸುತ್ತಿರುವುದು

**ಪ್ರಮುಖ ಬೇಡಿಕೆಗಳು:**

1. ಜಲಾಶಯಗಳು ಭರ್ತಿಯಾಗಿರುವುದರಿಂದ ತಕ್ಷಣವೇ ಜರೂರಾಗಿ ಐಸಿಸಿ (ICC) ಸಭೆಯನ್ನು ಕರೆದು ಕೃಷಿ ಜಮೀನುಗಳಿಗೆ ನೀರು ಬಿಡಲು ಆದೇಶಿಸಬೇಕು.
2. ರಾಂಪುರ ಏತ ನೀರಾವರಿ ವ್ಯಾಪ್ತಿಯ ಗ್ರಾಮಗಳಿಗೆ ಹತ್ತು ತಿಂಗಳ ಕಾಲ ನಿರಂತರವಾಗಿ ನೀರು ಹರಿಸಬೇಕು.
3. ನೀರು ಹಂಚಿಕೆಯಲ್ಲಿ ಈ ಭಾಗದ ರೈತರಿಗೆ ಆಗುತ್ತಿರುವ ತಾರತಮ್ಯವನ್ನು ತಕ್ಷಣವೇ ನಿಲ್ಲಿಸಬೇಕು.

ರೈತ ಕುಲಕ್ಕೆ ಮಾಡುತ್ತಿರುವ ತಾರತಮ್ಯವಾಗಿದೆ. ನಾವು ನದಿ ಪಾತ್ರದ ಗ್ರಾಮಗಳ ಜನರಾಗಿದ್ದು, ಇಲ್ಲಿನ ಪ್ರತಿಯೊಂದು ಹಳ್ಳಿಯ ಜಮೀನುಗಳು ತೇವದ (Page/ Seepage) ಸಮಸ್ಯೆಯಿಂದ ಕಷ್ಟ ಅನುಭವಿಸುತ್ತಿವೆ. ಈ ಭಾಗದ ರಾಂಪುರ ಏತ ನೀರಾವರಿ ಯೋಜನೆಯ ಮೂಲಕ ವರ್ಷದಲ್ಲಿ ಕನಿಷ್ಠ 10 ತಿಂಗಳ ಕಾಲ ನಿರಂತರವಾಗಿ ನೀರು ಹರಿಸಬೇಕು ನಾವು 10 ತಿಂಗಳು ನಿರಂತರ ನೀರು ಬಳಸಿದರೂ ಕೇವಲ 35 (ಮೂರೂವರೆ) ಟಿಎಂಸಿ ನೀರು ಮಾತ್ರ ಖರ್ಚಾಗುತ್ತದೆ. ಈ ಸತ್ಯವನ್ನು ನಾವು ಪ್ರತಿ ವರ್ಷವೂ ಅಧಿಕಾರಿಗಳ ಮತ್ತು ಜನಪ್ರತಿನಿಧಿಗಳ ಗಮನಕ್ಕೆ ತರುತ್ತಲೇ ಬಂದಿದ್ದೇವೆ. ಆದ್ದರಿಂದ ನಮಗೆ ಇತರೆ ಸಾಮಾನ್ಯ ಕಾಲುವೆಗಳಂತೆ ನಿಗದಿಪಡಿಸದೆ, ರಾಂಪುರ ಏತ ನೀರಾವರಿಗೆ ನಿರಂತರ ನೀರು ಒದಗಿಸಬೇಕೆಂದರು .

ಒಂದು ವೇಳೆ ರೈತ ಸಂಘಟನೆಯ ಈ ನ್ಯಾಯಸಮ್ಮತವಾದ ಮನವಿಗೆ ಅಧಿಕಾರಿಗಳು ಹಾಗೂ ಜನಪ್ರತಿನಿಧಿಗಳು ತಕ್ಷಣ ಸ್ಪಂದಿಸದಿದ್ದರೆ, ಮುಂಬರುವ ದಿನಗಳಲ್ಲಿ ಕೃಷ್ಣಾ ಜಲ ನಿಗಮದ ಅಧಿಕಾ–ರಿಗಳ ಕಚೇರಿ ಮುಂದೆ ರೈತರಿಂದ ಉಗ್ರ ಹೋರಾಟ ಮತ್ತು ಧರಣಿಯನ್ನು ಹಮ್ಮಿಕೊಳ್ಳಬೇಕಾಗುತ್ತದೆ ಎಂದು ಒತ್ತಾಯಿಸಿದರು.ಈ ಸಂದರ್ಭದಲ್ಲಿ ಜಿಲ್ಲಾ ಉಪಾಧ್ಯಕ್ಷರು ಬಸನಗೌಡ ಮಾಲೀಪಾಟೀಲ್ , ಜಿಲ್ಲಾ ಗೌರವಾಧ್ಯಕ್ಷರು ಕುಪ್ಪಣ್ಣ ಮಾಣಿಕ ವಕೀಲರು , ತಾ ಪ್ರಾ ಕಾರ್ಯದರ್ಶಿ, ರಾಮಣ್ಣ ಡಿ ನಾಯಕ ನರಕಲದಿನ್ನಿ , ತಾ ಕಾರ್ಯಾಧ್ಯಕ್ಷ ಹುಲಗಪ್ಪ ನಾಯಕ ಗುಡುಗುಂಟ , ತಾಲೂಕು ಉಪಾಧ್ಯಕ್ಷರು, ಸಹದೇವಪ್ಪ ಈಚನಾಳ , ತಾಲೂಕು ಸಂಘಟನ ಕಾರ್ಯದರ್ಶಿ, ಖಾಜ ವಲಿ ಜಾ, ನಂದಿಹಾಳ , ತಾಲೂಕು ಗೌರವ ಅಧ್ಯಕ್ಷರು, ಸಗರಪ್ಪ ಮೇಟಿ ಉಪ್ಪೇರಿ , ಎಮ್ ಡಿ ಹುಸಮಾನ್ ಆರ್ ಬೇಂಡೋಣಿ ಕ.ಪ.ಸ.ರ.ವೇ. ಜಿಲ್ಲಾ ಸಂಘಟನ ಅಧ್ಯಕ್ಷರು ಸೇರಿದಂತೆ ಇತರರು ಇದ್ದರು .

## ನೇಮಕಾತಿ ಪ್ರಕಟಣೆ

**ಕರ್ನಾಟಕ ಕಂದಾಯ ಇಲಾಖೆ ನೇಮಕಾತಿ 2026 ? 572 ಗ್ರಾಮ ಆಡಳಿತ ಅಧಿಕಾರಿ (VAO) ಹುದ್ದೆಗಳಿಗೆ ಅರ್ಜಿ ಸಲ್ಲಿಸಿ 11 ಜುಲೈ 2026**

ಕರ್ನಾಟಕ ಕಂದಾಯ ಇಲಾಖೆ ನೇಮಕಾತಿ 2026: 572 ಗ್ರಾಮ ಆಡಳಿತ ಅಧಿಕಾರಿ (VAO) ಹುದ್ದೆಗಳ ನೇಮಕಾತಿಗಾಗಿ ಅಧಿಸೂಚನೆ. KEA (ಕರ್ನಾಟಕ ಪರೀಕ್ಷಾ ಪ್ರಾಧಿಕಾರ) 2026ರ ಜುಲೈ 11 ರಂದು ಅಧಿಕೃತ ಅಧಿಸೂಚನೆಯನ್ನು ಬಿಡುಗಡೆ ಮಾಡಿದೆ. ಕನಿಷ್ಠ 12ನೇ ತರಗತಿ ಉತ್ತೀರ್ಣರಾಗಿರುವ ಆಸಕ್ತ ಅಭ್ಯರ್ಥಿಗಳು, ಕರ್ನಾಟಕ ಕಂದಾಯ ಇಲಾಖೆಯ 2026ರ ಅಧಿಕೃತ ಅಧಿಸೂಚನೆಯ ಮೂಲಕ ಗ್ರಾಮ ಆಡಳಿತ ಅಧಿಕಾರಿ (VAO) ಹುದ್ದೆಗಳಿಗೆ ಅರ್ಜಿ ಸಲ್ಲಿಸಬಹುದು. ಕರ್ನಾಟಕ ಕಂದಾಯ ಇಲಾಖೆಯಲ್ಲಿ ವೃತ್ತಿಜೀವನವನ್ನು ರೂಪಿಸಿಕೊಳ್ಳಲು ಬಯಸುವ ಉದ್ಯೋಗಾಕಾಂಕ್ಷಿಗಳು ಈ ಅವಕಾಶವನ್ನು ಬಳಸಿಕೊಳ್ಳಬಹುದು. ಅಧಿಕೃತ ವೆಬ್‌ಸೈಟ್: kandaya.karnataka.gov.in

# 15 ದಿನಗಳಿಂದ ನೀರಿಲ್ಲ; ಅಧಿಕಾರಿಗಳ ವಿರುದ್ಧ ಶಫಿ ಚಾವುಶ್ ಆಕ್ರೋಶ

❏ ನೈಜ್ಯ ದೆಸೆ ನ್ಯೂಸ್

**ಮಾನ್ವಿ: ಪಟ್ಟಣದ ವಾರ್ಡ್ ನಂ. 18ರಲ್ಲಿ ಅಮೃತ್ 2.0 ಹಾಗೂ ಜೆಜೆಎಂ ಕಾಮಗಾರಿಯ ಅವೈಜ್ಞಾನಿಕ ನಿರ್ವಹಣೆಯಿಂದ ಕಳೆದ 15 ದಿನಗಳಿಂದ ಕುಡಿಯುವ ನೀರು ಸರಬರಾಜು ಸ್ಥಗಿತಗೊಂಡಿದ್ದು, ನಿವಾಸಿಗಳು ತೀವ್ರ ಸಂಕಷ್ಟ ಅನುಭವಿಸುತ್ತಿದ್ದಾರೆ. ರಸ್ತೆಗಳನ್ನು ಅಗೆದು ಗುಂಡಿಗಳನ್ನು ಸಮರ್ಪಕವಾಗಿ ಮುಚ್ಚದೆ ಬಿಟ್ಟಿರುವುದರಿಂದ ಸಾರ್ವಜನಿಕರು ಜೀವಭಯದಲ್ಲಿ ಸಂಚರಿಸುವಂತಾಗಿದೆ ಎಂದು ಸ್ಥಳೀಯರು ಆರೋಪಿಸಿದ್ದಾರೆ.**



ಸ್ಥಳೀಯ ಮುಖಂಡ ಶೌಕತ್ ಅಲಿ ಮಾತನಾಡಿ, "ಹೊಸ ಪೈಪ್‌ಲೈನ್ ಅಳವಡಿಸುವ ವೇಳೆ ಈಗಾಗಲೇ ಇರುವ ಕುಡಿಯುವ ನೀರಿನ ಪೈಪ್‌ಗಳಿಗೆ ಹಾನಿಯಾಗದಂತೆ ಕೆಲಸ ಮಾಡುವಂತೆ ಅಧಿಕಾರಿಗಳಿಗೆ ಮುಂಚಿತವಾಗಿಯೇ ತಿಳಿಸಿದ್ದೆವು. ಯಾವುದೇ ತೊಂದರೆಯಾಗುವುದಿಲ್ಲ, ಶೀಘ್ರದಲ್ಲೇ ಕಾಮಗಾರಿ ಪೂರ್ಣಗೊಳಿಸುತ್ತೇವೆ ಎಂದು ಭರವಸೆ ನೀಡಿದ್ದರು. ಆದರೆ ಕಾಮಗಾರಿ ಅವೈಜ್ಞಾನಿಕವಾಗಿ ನಡೆದ ಪರಿಣಾಮ ಇಂದು ವಾರ್ಡ್ ನಿವಾಸಿಗಳು ಕುಡಿಯುವ ನೀರಿಗಾಗಿ ಪರದಾಡುವ ಪರಿಸ್ಥಿತಿ ನಿರ್ಮಾಣವಾಗಿದೆ" ಎಂದು ಆರೋಪಿಸಿದರು.

ವಾರ್ಡ್ ನಿವಾಸಿ ಶಫಿ ಚಾವುಶ್ ಮಾತನಾಡಿ, "ಜೆಜೆಎಂ ಕಾಮಗಾರಿ ವೇಳೆ ನೀರಿನ ಪೈಪ್‌ಗಳನ್ನು ಹಾನಿಗೊಳಿಸಿದ್ದಾರೆ. 15 ದಿನಗಳು ಕಳೆದರೂ ಕಾಮಗಾರಿ ಪೂರ್ಣಗೊಂಡಿಲ್ಲ. ಅಧಿಕಾರಿಗಳು ಮತ್ತು ಇಂಜಿನಿಯರ್‌ಗಳನ್ನು ಪ್ರಶ್ನಿಸಿದರೆ ಸ್ಪಂದಿಸುವ ಬದಲು ನಮಗೇ ಗದರಿಸುತ್ತಿದ್ದಾರೆ. ಕೂಡಲೇ ನೀರು ಸರಬರಾಜು ಪುನರಾರಂಭಿಸಿ ಕಾಮಗಾರಿಯನ್ನು ಪೂರ್ಣಗೊಳಿಸಬೇಕು" ಎಂದು ಆಗ್ರಹಿಸಿದರು.

ರಾತ್ರಿ ವೇಳೆ ಬೆಳಕಿನ ಕೊರತೆ ಹಾಗೂ ರಸ್ತೆಯಲ್ಲಿ ಬಿಟ್ಟಿರುವ ಗುಂಡಿಗಳಿಂದ ಮಕ್ಕಳು, ಮಹಿಳೆಯರು ಮತ್ತು ಹಿರಿಯ ನಾಗರಿಕರು ಆತಂಕದಲ್ಲಿ ಓಡಾಡುವಂತಾಗಿದೆ. ಈ ಬಗ್ಗೆ ಹಲವು ಬಾರಿ ದೂರು ನೀಡಿದರೂ ಪುರಸಭೆ ಅಧಿಕಾರಿಗಳು ಹಾಗೂ ಗುತ್ತಿಗೆದಾರರು ನಿರ್ಲಕ್ಷ್ಯ ವಹಿಸುತ್ತಿದ್ದಾರೆ ಎಂದು ನಿವಾಸಿಗಳು ಆರೋಪಿಸಿದ್ದಾರೆ.

ಕೂಡಲೇ ಕುಡಿಯುವ ನೀರಿನ ವ್ಯವಸ್ಥೆ ಕಲ್ಪಿಸಿ, ರಸ್ತೆ ಕಾಮಗಾರಿಯನ್ನು ಸುರಕ್ಷಿತವಾಗಿ ಪೂರ್ಣಗೊಳಿಸುವಂತೆ ವಾರ್ಡ್ ನಿವಾಸಿಗಳು ಪುರಸಭೆ ಅಧಿಕಾರಿಗಳು ಹಾಗೂ ಸಂಬಂಧಪಟ್ಟ ಇಲಾಖೆಯನ್ನು ಒತ್ತಾಯಿಸಿದ್ದಾರೆ.

## ಸಿದ್ದರಾಮಯ್ಯನವರು ತಮ್ಮ ನಿರ್ಧಾರ ಕೈ ಬಿಟ್ಟು ಚುನಾವಣೆಗೆ ಸ್ಪರ್ಧಿಸಬೇಕು: ಡಾ.ನಾಗವೇಣಿ ಪಾಟೀಲ್

❏ ನೈಜ್ಯ ದೆಸೆ ನ್ಯೂಸ್

ಸಿಂಧನೂರು: ಮುಂಬರುವ 2028ರ ವಿಧಾನಸಭೆ ಚುನಾವಣೆಯಲ್ಲಿ ಮಾಜಿ ಸಿಎಂ ಸಿದ್ದರಾಮಯ್ಯನವರು ಸ್ಪರ್ಧಿಸುವುದಿಲ್ಲ ಎಂಬ ನಿರ್ಧಾರ ಕೈ ಬಿಟ್ಟು ಚುನಾವಣೆಗೆ ಅವರು ಸ್ಪರ್ಧಿಸಬೇಕು. ಸಿದ್ದರಾಮಯ್ಯನವರು ವಿಧಾನಸಭೆಗೆ ಅನಿವಾರ್ಯ ಎಂದು ಡಾ.ನಾಗವೇಣಿ ಎಸ್.ಪಾಟೀಲ್ ಕೆಪಿಸಿಸಿ ರಾಜ್ಯ ಮಹಿಳಾ ಪ್ರಧಾನ ಕಾರ್ಯದರ್ಶಿ ಅಭಿಪ್ರಾಯಪಟ್ಟಿದ್ದಾರೆ.



ರಾಜ್ಯ ರಾಜಕೀಯದಲ್ಲಿ ಸುದೀರ್ಘ ಅನುಭವ ಹೊಂದಿರುವ ಮಾಜಿ ಸಿಎಂ ಸಿದ್ದರಾಮಯ್ಯನವರು ವಿಧಾನಸಭೆಯಲ್ಲಿ ಇರಬೇಕು ಅನುಭವ ನಾಯಕತ್ವ ಅಗತ್ಯವಾಗಿದೆ. ಆಡಳಿತ ಅನುಭವ ಹಾಗೂ ಪ್ರಮುಖ ವಿಷಯಗಳ ಕುರಿತು ಸಮಗ್ರ ಚರ್ಚೆ ನಡೆಸುವ ಸಾಮರ್ಥ್ಯ ಹೊಂದಿರುವ ಅವರು ಸದನದಲ್ಲಿದ್ದರೆ ಆಡಳಿತ ಮತ್ತು ಪ್ರತಿಪಕ್ಷ ಎರಡಕ್ಕೂ ಗುಣಮಟ್ಟದ ಚರ್ಚೆ ನಡೆಯಲು ನೆರವಾಗುತ್ತದೆ. ರಾಜ್ಯ ರಾಜಕಾರಣ ಹಿತದೃಷ್ಟಿಯಿಂದ ಅವರು ವಿಧಾನಸಭೆಯಲ್ಲಿ ಸಕ್ರಿಯವಾಗಿ ಮುಂದುವರೆದು ಕಿರಿಯರಿಗೆ ಮಾರ್ಗದರ್ಶನ ಮಾಡಬೇಕು ಎಂದಿದ್ದಾರೆ.

## ತರಬೇತಿ ಮೂಲಕ ಕೌಶಲ ಗಳಿಸುವಲ್ಲಿ ಮುಂದಾಗಬೇಕು : ನಾಗಭೂಷಣ ಶಿವಾಚಾರ್ಯರು

❏ ನೈಜ್ಯ ದೆಸೆ ನ್ಯೂಸ್

**ಬಳ್ಳಾರಿ / ಕಂಪ್ಲಿ : ಮಹಿಳೆಯರು ಆರ್ಥಿಕ ಸ್ವಾವಲಂಬನೆಗೊಳ್ಳಲು ಕೌಶಲ ಅಗತ್ಯವಿದ್ದು ತರಬೇತಿ ಮೂಲಕ ಕೌಶಲ ಗಳಿಸುವಲ್ಲಿ ಮುಂದಾಗಬೇಕು ಎಂದು ಹೆಬ್ಬಾಳ ಬೃಹನ್ಮಠದ ನಾಗಭೂಷಣ ಶಿವಾಚಾರ್ಯರು ಹೇಳಿದರು. ಇಲ್ಲಿನ ಸಾಂಗತ್ರಯ ಸಂಸ್ಕೃತ ಪಾಠಶಾಲೆಯಲ್ಲಿ ಶ್ರೀ ಅಕ್ಕಮಹಾದೇವಿ ಮಹಿಳಾ ಮಂಡಳಿ ಆಯೋಜಿಸಿದ ಮಹಿಳಾ ಸ್ವ ಉದ್ಯೋಗ ಕೌಶಲ ವಸ್ತುಗಳ ಪ್ರದರ್ಶನ ಕಾರ್ಯಕ್ರಮದ ಸಾನ್ನಿಧ್ಯವಹಿಸಿ ಮಾತನಾಡಿ, ಪ್ರಸ್ತುತ ದಿನಮಾನಗಳಲ್ಲಿ ಸ್ವ ಉದ್ಯೋಗಕ್ಕೆ ಕೌಶಲ ಅಗತ್ಯವಿದೆ. ಪ್ರತಿಯೊಬ್ಬರಲ್ಲೂ ಸುಪ್ತವಾಗಿರುವ ಕೌಶಲವನ್ನು ಬಳಸಿಕೊಂಡು ವಸ್ತುಗಳನ್ನು ಉತ್ಪಾದಿಸಿ ಮಾರಾಟ ಮಾಡುವ ಮೂಲಕ ಆದಾಯಗಳಿಸಬೇಕಿದೆ ಎಂದರು.**



ಅಕ್ಕನ ಬಳಗದ ಸದಸ್ಯೆಯರು ಉತ್ಪಾದಿಸಿದ ಸಾವಯವ ವಸ್ತು, ಆಹಾರ ಪದಾರ್ಥ ಸೇರಿ ನಾನಾ ವಸ್ತುಗಳ ಪ್ರದರ್ಶನಗೊಂಡವು. ಸಾಂಗತ್ರಯ ಸಂಸ್ಕೃತ ಪಾಠಶಾಲೆ ಅಧ್ಯಕ್ಷ ಇಟಗಿ ಬಸವರಾಜಗೌಡ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು. ಅಕ್ಕಮಹಾದೇವಿ ಮಹಿಳಾ ಮಂಡಳಿ ಅಧ್ಯಕ್ಷೆ ಡಾ.ಶಾರದಾ ಜಗನ್ನಾಥ ಹಿರೇಮಠ, ಪಾಠಶಾಲೆ ಮಾಜಿ ಅಧ್ಯಕ್ಷ ಎಸ್. ಎಸ್. ಎಂ.ಚನ್ನಬಸವರಾಜ ಸೇರಿ ಅಕ್ಕನ ಬಳಗದ ಪದಾಧಿಕಾರಿಗಳು, ಸದಸ್ಯೆಯರು ಸೇರಿದಂತೆ ಇತರರು ಹಾಜರಿದ್ದರು.

# ಗುರುವಿನ ಅನುಗ್ರಹಕ್ಕೆ ಪಾತ್ರರಾಗಲು ಮಹತ್ವದ ದಿನವೇ ಗುರು ಪೂರ್ಣಿಮೆ

❏ ನೈಜ್ಯ ದೆಸೆ ನ್ಯೂಸ್

**ಭಾರತೀಯ ಪರಂಪರೆಯಲ್ಲಿ 'ಗುರು'ವಿಗೆ ದೇವರಷ್ಟೇ ಉನ್ನತ ಸ್ಥಾನ ನೀಡಲಾಗಿದೆ. "ಗು" ಎಂದರೆ ಕತ್ತಲೆ, "ರು" ಎಂದರೆ ಬೆಳಕು. ನಮ್ಮ ಜೀವನದಲ್ಲಿನ ಅಜ್ಞಾನವೆಂಬ ಕತ್ತಲೆಯನ್ನು ದೂರಾಗಿಸಿ, ಜ್ಞಾನವೆಂಬ ಬೆಳಕನ್ನು ನೀಡುವ ಮಹಾ ಚೇತನವೇ ಗುರು. ಅಂತಹ ಗುರುಗಳನ್ನು ಸ್ಮರಿಸಿ, ಗೌರವಿಸುವ ದಿನವೇ ಗುರುಪೂರ್ಣಿಮೆ.**



ಗುರುವಿನ ಅನುಗ್ರಹಕ್ಕೆ ಪಾತ್ರರಾಗಲು ಮಹತ್ವದ ದಿನ ಗುರು ಪೂರ್ಣಿಮೆ ಭಾರತೀಯ ಸಂಸ್ಕೃತಿಯಲ್ಲಿ ಗುರುವಿಗೆ ಮಹತ್ವವಾದ ಸ್ಥಾನವಿದೆ. ಸಮಸ್ತ ಜೀವರಾಶಿಗಳನ್ನು ನಿಯಂತ್ರಿಸುವ ದೇವಾನು ದೇವತೆಗಳಿಗೂ ಸಹ ಗುರುವಿನ ಅಗತ್ಯವಿದೆ. ಈ ಕಾರಣದಿಂದಲೇ ಗುರುವಿಗೆ ಸನಾತನ ಧರ್ಮದಲ್ಲಿ ವಿಶೇಷ ಸ್ಥಾನವಾಗಿದೆ.

ಭಾರತೀಯ ಸಂಸ್ಕೃತಿಯಲ್ಲಿ ಗುರುವಿಗೆ ಮಹತ್ವವಾದ ಸ್ಥಾನವಿದೆ. ಸಮಸ್ತ ಜೀವರಾಶಿಗಳನ್ನು ನಿಯಂತ್ರಿಸುವ ದೇವಾನು ದೇವತೆಗಳಿಗೂ ಸಹ ಗುರುವಿನ ಅಗತ್ಯವಿದೆ. ಈ ಕಾರಣದಿಂದಲೇ ಗುರುವಿಗೆ ಸನಾತನ ಧರ್ಮದಲ್ಲಿ ವಿಶೇಷ ಸ್ಥಾನ. ಗುರುವಿನ ಮಹತ್ವ, ಅಗತ್ಯ ತಿಳಿಸುವ ಮಾತೊಂದು ಹೀಗಿದೆ, ಅದೇನೆಂದರೆ ಹರ ಮುನಿದರೂ ಗುರು ಕಾಯುತ್ತಾನೆ ಎಂದು. ಅಂದರೆ ಒಂದು ವೇಳೆ ದೇವರು ನಮ್ಮ ರಕ್ಷಣೆಗೆ ಬಾರದಿದ್ದರೂ, ಅಜ್ಞಾನದಿಂದ ನಮಗೆ ಉಂಟಾಗಿರುವ ಸಮಸ್ಯೆಯನ್ನು ನಿವಾರಿಸಲು ಗುರು ಸಹಕಾರಿಯಾಗುತ್ತಾರೆ. ಎಷ್ಟೋ ಬಾರಿ ಗುರು ಎಂಬ ಶಕ್ತಿಗೆ ದೇವತೆಗಳೂ ಮೊರೆ ಹೋಗಿದ್ದು, ಪರಿಹಾರ ಕಂಡುಕೊಂಡಿದ್ದಾರೆ. ಅಂತಹ ಗುರುವಿನ ಅನುಗ್ರಹಕ್ಕೆ ಪಾತ್ರರಾಗಲು ಗುರುಪೂರ್ಣಿಮೆ ಮಹತ್ವದ ದಿನವಾಗಿದೆ. ಗುರುಪೂರ್ಣಿಮೆಯಂದು ಗುರುವಿನಿಂದ ಅನುಗ್ರಹ, ಉಪದೇಶ ಪಡೆದರೆ, ಯಾವುದೇ ವ್ಯಕ್ತಿಯಲ್ಲಿರುವ ಸಂದೇಹ, ಜಿಜ್ಞಾಸೆಗಳು ಬಗೆಹರಿದು ಉತ್ತಮ ಜೀವನ ನಡೆಸಲು ಸಾಧ್ಯ ಎಂಬ ನಂಬಿಕೆ ಇದೆ. ಈ ಹಿನ್ನೆಲೆಯಲ್ಲಿ ಗುರುಪೂರ್ಣಿಮೆಯ ದಿನದಂದು, ಸದಾಶಿವ, ವಿಷ್ಣು, ವಸಿಷ್ಠ ಮಹರ್ಷಿ, ಶಕ್ತಿ ಮಹರ್ಷಿ, ಪರಾಶರ ಮಹರ್ಷಿ, ವಿಷ್ಣುವಿನ ರೂಪವಾಗಿರುವ, ವೇದಗಳನ್ನು ವಿಭಾಗಿಸಿದ ವ್ಯಾಸರಿಂದ ಮೊದಲುಗೊಂಡು, ಶುಕಾಚಾರ್ಯರಿಂದ ಮುಂದುವರೆದ ಗುರು ಪರಂಪರೆಯನ್ನು ಆಯಾ ಪರಂಪರೆ ಹಾಗೂ ಸಂಪ್ರದಾಯಗಳಿಗೆ ತಕ್ಕಂತೆ ಆರಾಧಿಸಲಾಗುತ್ತದೆ. ಇಷ್ಟೇ ಅಲ್ಲದೇ ಸನ್ಯಾಸಿಗಳು ಗುರುಪೂರ್ಣಿಮೆಯಂದು ವ್ರತ ಸಂಕಲ್ಪ ಮಾಡುತ್ತಾರೆ.

ಸಾಮಾನ್ಯವಾಗಿ ಪರಿವ್ರಾಜಕರಾಗಿರುವ ಯತಿಗಳು ಆಷಾಢ ಮಾಸದ ಹುಣ್ಣಿಮೆಯಿಂದ ಕಾರ್ತಿಕ ಮಾಸದ ಹುಣ್ಣಿಮೆಯ ವರೆಗೆ ಒಂದೇ ಪ್ರದೇಶದಲ್ಲಿದ್ದುಕೊಂಡು ಗುರುಪೂರ್ಣಿಮೆಯಂದು ಸನ್ಯಾಸಿಗಳು ನಾಲ್ಕು ತಿಂಗಳ ವ್ರತವನ್ನು ಕೈಗೊಳ್ಳುವ ಚಾತುರ್ಮಾಸ್ಯ ವ್ರತದ ಸಂಕಲ್ಪವನ್ನು ವ್ಯಾಸಪೂಜೆ ಮಾಡುವ ಮೂಲಕ ಕೈಗೊಳ್ಳುತ್ತಾರೆ. ಚಾತುರ್ಮಾಸ್ಯ ವ್ರತ ಸಂಕಲ್ಪ ಹೇಗೆ?: ಅದ್ವೈತ ಪರಂಪರೆಯ ಪ್ರಕಾರ ಬ್ರಹ್ಮವಿದ್ಯೆಯನ್ನು ತಿಳಿಸುವ ಗುರುಗಳಾದ ಮೂವರು ಆಚಾರ್ಯಗಳ ಪಂಚಕಗಳಿಗೆ ಷೋಡಶೋಪಚಾರ ಪೂಜೆ ನೆರವೇರಿಸುವ ಮೂಲಕ ವ್ಯಾಸಪೂಜೆ ಪ್ರಾರಂಭವಾಗುತ್ತದೆ. ವ್ಯಾಸಪೂಜೆ ವೇಳೆ ಬ್ರಹ್ಮಚಾರಿಗಳಾದ ಸನಕ, ಸನಂದನ, ಸನತ್ಸುಜಾತ ಮತ್ತು ಸನತ್ಕುಮಾರರು ಅನುಕ್ರಮವಾಗಿ ಪೂರ್ವ, ದಕ್ಷಿಣ, ಪಶ್ಚಿಮ, ಉತ್ತರ ದಿಕ್ಕುಗಳಲ್ಲಿದ್ದು, ಮಧ್ಯದಲ್ಲಿ ಶ್ರೀ ಕೃಷ್ಣನನ್ನು ಪ್ರತಿಷ್ಠಾಪಿಸಿರುವ ಕೃಷ್ಣ ಪಂಚಕಕ್ಕೆ ಪೂಜೆ ನೆರವೇರುತ್ತದೆ. ನಂತರ ವೇದವ್ಯಾಸ ಪಂಚಕದಲ್ಲಿ, ವೇದವ್ಯಾಸರು ಮಧ್ಯದಲ್ಲಿರಲಿದ್ದು, ಅವರ ನಾಲ್ಕು ಶಿಷ್ಯರಾದ ಪೈಲ, ವೈಶಂಪಾಯನ, ಜೈಮಿನಿ, ಸಮನ್ತರಿರುವ ವ್ಯಾಸ ಪಂಚಕಕ್ಕೆ ಪೂಜೆ ನಡೆಯಲಿದೆ. ವ್ಯಾಸ ಪಂಚಕಕ್ಕೆ ಪೂಜೆ ಸಲ್ಲಿಸಿದ ಬಳಿಕ ಆದಿಶಂಕರರ ಪಂಚಕಕ್ಕೆ ಪೂಜೆ ನಡೆಯಲಿದ್ದು, ಕೇಂದ್ರ ಭಾಗದಲ್ಲಿ ಆದಿ ಶಂಕರರು, ಸುತ್ತಲೂ ಅವರ ಶಿಷ್ಯರಾದ ಹಸ್ತಾಮಲಕಾಚಾರ್ಯರು, ಸುರೇಶ್ವರಾಚಾರ್ಯರು, ಪದ್ಮಪಾದಾಚಾರ್ಯರು, ತೋಟಕಾಚಾರ್ಯರಿರುವ ಪಂಚಕಕ್ಕೆ ಪೂಜೆ ನಡೆಯಲಿದೆ. ಈ ಮೂರು ಪಂಚಕಗಳಿಗೆ ಪೂಜೆ ಸಲ್ಲಿಸಿದ ಬಳಿಕ ಯತಿಗಳು ಆದಿ ಶಂಕರರಿಂದ ಪ್ರಾರಂಭವಾಗಿ ಅವರ ಹಿಂದಿನ ಗುರುಗಳವರೆಗೆ ನಡೆದು ಬಂದಿರುವ ಗುರುಪರಂಪರೆಗೆ ಪೂಜೆ ಸಲ್ಲಿಸಿ ಚಾತುರ್ಮಾಸ್ಯ ವ್ರತ ಕೈಗೊಳ್ಳಲಿದ್ದಾರೆ.

ಗುರುಪೂರ್ಣಿಮೆಯು ಕೇವಲ ಒಂದು ದಿನದ ಆಚರಣೆಯಾಗಬಾರದು. ಗುರುಗಳು ತೋರಿದ ಸನ್ಮಾರ್ಗದಲ್ಲಿ ನಡೆಯುವುದು ಮತ್ತು ಅವರು ನೀಡಿದ ಜ್ಞಾನವನ್ನು ಸಮಾಜದ ಒಳಿತಿಗಾಗಿ ಬಳಸುವುದು ನಾವು ಅವರಿಗೆ ನೀಡಬಹುದಾದ ನಿಜವಾದ ಗುರುದಕ್ಷಿಣೆಯಾಗಬೇಕು.

# ಸಮಾನತೆಗೆ ಹೋರಾಡಿದವರು ಶರಣರು : ಶಿಕ್ಷಕಿ ಜ್ಯೋತಿ ಇಟಗಿ ಅಭಿಪ್ರಾಯ

❏ ನೈಜ್ಯ ದೆಸೆ ನ್ಯೂಸ್

**ಬಳ್ಳಾರಿ / ಕಂಪ್ಲಿ: 'ಹನ್ನೆರಡನೇ ಶತಮಾನದಲ್ಲಿ ಬಸವಣ್ಣ ಮತ್ತು ಶಿವಶರಣರು ಜಾತಿ, ವರ್ಣ ಹಾಗೂ ಲಿಂಗಬೇಧವಿಲ್ಲದೆ ಎಲ್ಲರಿಗೂ ಸಮಾನತೆಯನ್ನು ದಯಪಾಲಿಸಿದರು. ಅನುಭವ ಮಂಟಪದಲ್ಲಿ ಪುರುಷರಂತೆ ಮಹಿಳೆಯರಿಗೂ ಆಧ್ಯಾತ್ಮಿಕ ಮತ್ತು ಧಾರ್ಮಿಕ ಚರ್ಚೆಗಳಲ್ಲಿ ಸಮಾನ ಅವಕಾಶ ನೀಡಲಾಯಿತು.**




ಶರಣರ ಚಿಂತನೆಗಳು, ಲಿಂಗ ತಾರತಮ್ಯವಿಲ್ಲದೆ ಎಲ್ಲರಿಗೂ ಸಮಾನ ವೇದಿಕೆ, ಸ್ತ್ರೀ ಸ್ವಾತಂತ್ರ್ಯ ಮತ್ತು ಸಮಾನತೆಯ ಸಾರವನ್ನು ತಿಳಿಸಿ ಮಹಿಳೆಯರಿಗೂ ಧಾರ್ಮಿಕ ಹಕ್ಕುಗಳನ್ನು ಅನುಗ್ರಹಿಸಿದ್ದರು' ಎಂದು ಇಲ್ಲಿನ 4ನೇ ವಾರ್ಡ್ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ಶಿಕ್ಷಕಿ ಜ್ಯೋತಿ ಇಟಗಿ ಅಭಿಪ್ರಾಯಪಟ್ಟರು. ಪಟ್ಟಣದ ಹೊಸ ಬಸ್ ನಿಲ್ದಾಣ ಹತ್ತಿರದ ಮಡಿವಾಳ ಮಾಚಿದೇವ ಸಮುದಾಯ ಭವನದಲ್ಲಿ ತಾಲ್ಲೂಕು ಶರಣ ಸಾಹಿತ್ಯ ಪರಿಷತ್ ಹಮ್ಮಿಕೊಂಡಿದ್ದ 192ನೇ ಮಹಾಮನೆ ಕಾರ್ಯಕ್ರಮದಲ್ಲಿ 'ಶರಣರ ಸಮಾನತೆ' ಕುರಿತು ಉಪನ್ಯಾಸ ನೀಡಿ, ಶಿವಶರಣರ ವಚನ ಸಾಹಿತ್ಯವು ಕನ್ನಡ ಸಾಹಿತ್ಯಕ್ಕೆ ನೀಡಿದ ಶ್ರೇಷ್ಠ ಕೊಡುಗೆಯಾಗಿದೆ ಎಂದರು.

ಪರಿಷತ್ ತಾಲ್ಲೂಕು ಘಟಕದ ಅಧ್ಯಕ್ಷ ಜಿ. ಪ್ರಕಾಶ್ ಅಧ್ಯಕ್ಷತೆ ವಹಿಸಿದ್ದರು. ಅಕ್ಕನ ಬಳಗದ ಸಹ ಕಾರ್ಯದರ್ಶಿ ಬಿ.ಎಂ. ಪುಷ್ಪಾ ರುದ್ರಯ್ಯ, ಶಿಕ್ಷಕಿ ಗುರುಬಸಮ್ಮ ಸೊಪ್ಪಿನ ಮಠ, ಮಡಿವಾಳ ಸಮುದಾಯದ ತಾಲ್ಲೂಕು ಅಧ್ಯಕ್ಷ ಮಡಿವಾಳ ಹುಲುಗಪ್ಪ, ಪರಿಷತ್ ಕಾರ್ಯಾಧ್ಯಕ್ಷ ಬಂಗಿ ದೊಡ್ಡ ಮಂಜುನಾಥ, ಪದಾಧಿಕಾರಿಗಳಾದ ಎಸ್.ಡಿ. ಬಸವರಾಜ, ಎಚ್. ನಾಗರಾಜ, ಅಶೋಕ ಕುಕನೂರು, ಎಲಿಗಾರ ವೆಂಕಟರೆಡ್ಡಿ, ಕೆ. ಚಂದ್ರಶೇಖರ್, ಶಂಕ್ರಪ್ಪ, ಡಿ. ಬಸವರಾಜ, ಯು.ಎಂ. ವಿದ್ಯಾಶಂಕರ, ವಿರುಪಾಕ್ಷಿ, ಹನುಮಂತ್, ಚಂದ್ರಯ್ಯ ಸೊಪ್ಪಿನ ಮಠ, ಬುಸಾರೆ ನಾರಾಯಣಪ್ಪ, ರಾಜೇಶ್, ಇದ್ದರು.

ನೈಜ್ಯ ದೆಸೆ
ಕನ್ನಡ ದಿನಪತ್ರಿಕೆಯನ್ನು ತಪ್ಪದೆ ಓದಿರಿ.

# ರಾಜ್ಯ ಬಿಜೆಪಿಯಲ್ಲಿ ಮತ್ತೆ ವಿಜಯೇಂದ್ರ ಬದಲಾವಣೆಯ ಗುಸುಗುಸು

❏ ನೈಜ್ಯ ದೆಸೆ ನ್ಯೂಸ್

**ಬೆಂಗಳೂರು: ಮನೆಯೊಂದು ಮೂರು ಬಾಗಿಲು ಎಂಬಂತಾಗಿರುವ ರಾಜ್ಯ ಬಿಜೆಪಿಯಲ್ಲಿ ನಾಯಕತ್ವ ಬದಲಾವಣೆ ಗುಸು ಗುಸು ಕೇಳಿ ಬರುತ್ತಿರುವ ಬೆನ್ನಲ್ಲೇ, ಉಸ್ತುವಾರಿ ತಲೆ ತಂಡಕ್ಕೂ ಒತ್ತಡ ಹೆಚ್ಚಾಗುತ್ತಿದೆ.ಬಿಜೆಪಿಯ ಸಂಘಟನಾತಕ ಹಿಡಿತ ಮತ್ತು ಮುಂಬರುವ ರಾಜಕೀಯ ಸವಾಲುಗಳ ಕುರಿತು ಪಕ್ಷದ ಆಂತರಿಕ ವಲಯದಲ್ಲಿ ತೀವ್ರ ಚರ್ಚೆಗಳು ನಡೆಯುತ್ತಿವೆ.**

ಅದರಲ್ಲೂ ವಿಶೇಷವಾಗಿ, ರಾಜ್ಯ ಬಿಜೆಪಿ ಉಸ್ತುವಾರಿ ಡಾ. ರಾಧಾಮೋಹನ್ ಅಗರ್ವಾಲ್ ಅವರ ಕಾರ್ಯವೈಖರಿಯ ಬಗ್ಗೆ ಪಕ್ಷದೊಳಗೆ ತಳಮಳ ಹಾಗೂ ಅಸಮಾಧಾನ ಸ್ಫೋಟಗೊಂಡಿದೆ. ವಿಧಾನ ಪರಿಷತ್ ಚುನಾವಣೆಗಳಲ್ಲಿ ನಡೆದಿದೆ ಎನ್ನಲಾದ ಅಡ್ಡಮತದಾನದ ಬೆಳವಣಿಗೆಗಳು ಮತ್ತು ಹಿರಿಯ ಮುಖಂಡರ ಬಹಿರಂಗ ವಾಕ್ಸಮರಗಳು ಪಕ್ಷಕ್ಕೆ ದೊಡ್ಡ ತಲೆನೋವಾಗಿ ಪರಿಣಮಿಸಿವೆ.

ಈ ಎಲ್ಲ ಬೆಳವಣಿಗೆಗಳ ಹಿನ್ನೆಲೆಯಲ್ಲಿ ರಾಜ್ಯ ಬಿಜೆಪಿ ಉಸ್ತುವಾರಿ ರಾಧಾ ಮೋಹನ್ ದಾಸ್ ಅಗರ್ವಾಲ್ ಅವರ ಕಾರ್ಯವೈಖರಿ ಹಾಗೂ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಅವರ ಮುಖಂಡತ್ವದ ಬಗ್ಗೆ ಕಮಲ ಪಾಳಯದಲ್ಲಿ ತೀವ್ರ ಚರ್ಚೆಗಳು ಆರಂಭವಾಗಿವೆ. ರಾಜ್ಯದಲ್ಲಿ ಪಕ್ಷವನ್ನು ಒಗ್ಗಟ್ಟಾಗಿ ಕೊಂಡೊಯ್ಯುವಲ್ಲಿ ಮತ್ತು ಭಿನ್ನಮತವನ್ನು ಶಮನ ಮಾಡುವಲ್ಲಿ ಅವರು ವಿಫಲರಾಗಿದ್ದಾರೆ ಎಂಬ ಗಂಭೀರ ಆರೋಪಗಳು ಕೇಳಿಬಂದಿವೆ.

ಪಕ್ಷದ ಕೆಲ ಹಿರಿಯ ನಾಯಕರು ಹಾಗೂ ಸ್ಥಳೀಯ ಘಟಕಗಳಲ್ಲಿ ಭಿನ್ನಾಭಿಪ್ರಾಯಗಳು ತಲೆದೋರಿದ್ದವು. ಈ ಅಸಮಾಧಾನಗಳನ್ನು ಆರಂಭದಲ್ಲೇ ಹತ್ತಿಕ್ಕಿ, ಎಲ್ಲರನ್ನೂ ವಿಶ್ವಾಸಕ್ಕೆ ತೆಗೆದುಕೊಂಡು ಮುನ್ನಡೆಯುವಲ್ಲಿ ಡಾ. ರಾಧಾಮೋಹನ್ ಅಗರ್ವಾಲ್ ಅವರ ರಣತಂತ್ರಗಳು ಸಂಪೂರ್ಣವಾಗಿ ಯಶಸ್ವಿಯಾಗಿಲ್ಲ ಎಂಬುದು ಪ್ರಮುಖ ನಾಯಕರ ಅಳಲು. ಬಂಡಾಯದ ಮುಖಗಳನ್ನು ಸಮಾಧಾನಪಡಿಸುವ ಬದಲು, ಏಕಪಕ್ಷೀಯ ನಿರ್ಧಾರಗಳು ಪಕ್ಷದೊಳಗೆ ಮತ್ತಷ್ಟು ಬಿರುಕು ಮೂಡಲು ಕಾರಣವಾಗಿವೆ ಎಂಬುದು ಪ್ರಮುಖ ದೂರು.

ಚಿಕ್ಕಬಳ್ಳಾಪುರ ಸಂಸತ್ ಸದಸ್ಯ ಕೆ.ಸುಧಾಕರ್ ಹಾಗೂ ಯಲಹಂಕ ಶಾಸಕ ಎಸ್.ಆರ್.ವಿಶ್ವನಾಥ್ ಸೇರಿದಂತೆ ಹಲವು ಪ್ರಮುಖರು ಮಾಧ್ಯಮಗಳ ಮುಂದೆ ಪರಸ್ಪರ ಆರೋಪ-ಪ್ರತ್ಯಾರೋಪಗಳಲ್ಲಿ ತೊಡಗಿರುವುದು ಪಕ್ಷಕ್ಕೆ ಮುಜುಗರ ತಂದಿದೆ. ಆಡಿಯೋ ವಿವಾದ ಮತ್ತು ಅಸಮಾಧಾನ : ಮಾಜಿ ಮುಖ್ಯಮಂತ್ರಿ ಡಿ.ವಿ.ಸದಾನಂದ ಗೌಡ ಅವರ ಹೆಸರಿನಲ್ಲಿ ವೈರಲ್ ಆದ ಆಡಿಯೋ ವಿವಾದ ಹಾಗೂ ಬಂಡಾಯ ನಾಯಕ ಬಸನಗೌಡ ಪಾಟೀಲ್ ಯತ್ನಾಳ್ ಬಣದ ನಿರಂತರ ಆಕ್ರೋಶವು ರಾಜ್ಯ ಬಿಜೆಪಿಯಲ್ಲಿ



ತಳಮಳ ಸೃಷ್ಟಿಸಿದೆ. ಉಸ್ತುವಾರಿ ವಿಫಲತೆಯ ಆರೋಪ: ಪಕ್ಷದ ಹಿರಿಯರನ್ನು ಒಗ್ಗೂಡಿಸಿಕೊಂಡು ಹೋಗುವಲ್ಲಿ ಹಾಗೂ ಬಂಡಾಯವನ್ನು ಹತ್ತಿಕ್ಕುವಲ್ಲಿ ರಾಜ್ಯ ಬಿಜೆಪಿ ಉಸ್ತುವಾರಿ ರಾಧಾ ಮೋಹನ್ ದಾಸ್ ಅಗರ್ವಾಲ್ ಸಂಪೂರ್ಣವಾಗಿ ವಿಫಲರಾಗಿದ್ದಾರೆ ಎಂಬ ಮಾತುಗಳು ಕೇಳಿಬರುತ್ತಿದ್ದು, ಅವರ ಬದಲಾವಣೆಗೆ ದೆಹಲಿ ಮಟ್ಟದಲ್ಲಿ ಕಸರತ್ತು ಆರಂಭವಾಗಿದೆ.

ಟ್ರಬಲ್ ಶೂಟರ್‌ಗಳ ಬೇಡಿಕೆ : ಕರ್ನಾಟಕ ಬಿಜೆಪಿಯ ಇತಿಹಾಸವನ್ನು ಅವಲೋಕಿಸಿದರೆ, ಇಲ್ಲಿನ ರಾಜಕೀಯ ಸಂಕೀರ್ಣತೆಯನ್ನು ನಿಭಾಯಿಸಲು ಹೈಕಮಾಂಡ್ ಹಿಂದಿನ ಕಾಲದಲ್ಲಿ ಪ್ರಖ್ಯಾತ ನಾಯಕರನ್ನು ಟ್ರಬಲ್ ಶೂಟರ್‌ಗಳಾಗಿ (ಸಮಸ್ಯೆ ಪರಿಹಾರಕರು) ಕಳುಹಿಸುತ್ತಿತ್ತು.ಅರುಣ್ ಜೇಟ್ಲಿ ಮತ್ತು ಧರ್ಮೇಂದ್ರ ಪ್ರಧಾನ್ ಅವರಂತಹ ನುರಿತವರು ರಾಜ್ಯಕ್ಕೆ ಉಸ್ತುವಾರಿಯಾಗಿ ಬಂದಾಗ, ಸ್ಥಳೀಯ ನಾಯಕರ ಜೊತೆ ನಿರಂತರ ಮಾತುಕತೆ ನಡೆಸಿ, ಭಿನ್ನಮತಗಳನ್ನು ಇತ್ಯರ್ಥ ಪಡಿಸುತ್ತಿದ್ದರು.

ರಾಜ್ಯದ ನಾಯಕರ ನಡುವೆ ಸಮನ್ವಯ ಸಾಧಿಸಿ, ಕಾರ್ಯಕರ್ತರಲ್ಲಿ ಉತ್ಸಾಹ ತುಂಬುವಲ್ಲಿ ಇಂತಹ ನಾಯಕರ ಶೈಲಿ ಅತ್ಯಂತ ಪರಿಣಾಮಕಾರಿಯಾಗಿತ್ತು. ಪ್ರಸ್ತುತ ದಿನಗಳಲ್ಲಿ ಅಂತಹ ಪ್ರಬಲ ನಾಯಕರ ಅಗತ್ಯವಿದೆ ಎಂಬುದು ಬಹುತೇಕರ ಆಗ್ರಹವಾಗಿದೆ. ರಾಜ್ಯದಲ್ಲಿ ಪಕ್ಷವನ್ನು ತಳಮಟ್ಟದಿಂದ ಬಲಪಡಿಸಲು ಮತ್ತು ಮುಂಬರುವ ಸ್ಥಳೀಯ ಸಂಸ್ಥೆ ಹಾಗೂ ಇತರ ಚುನಾವಣೆಗಳನ್ನು ಸಮರ್ಥವಾಗಿ ಎದುರಿಸಲು ಪ್ರಸ್ತುತ ಉಸ್ತುವಾರಿಗಳ ಕಾರ್ಯವೈಖರಿಯಲ್ಲಿ ಸಕಾರಾತಕ ಬದಲಾವಣೆ ತರಬೇಕು ಇಲ್ಲವೇ ಕರ್ನಾಟಕದ ರಾಜಕೀಯ ಪರಿಸ್ಥಿತಿಯನ್ನು ಬಲ್ಲ, ಸಮರ್ಥವಾಗಿ ವಿವಾದಗಳನ್ನು ಬಗೆಹರಿಸಬಲ್ಲ ಪ್ರಭಾವಿ ರಾಷ್ಟ್ರೀಯ ನಾಯಕರನ್ನು ಹೊಸ ಉಸ್ತುವಾರಿಯನ್ನಾಗಿ ನೇಮಿಸಬೇಕು ಎಂದು ದೆಹಲಿ ಮಟ್ಟದ ನಾಯಕರಿಗೆ ರಾಜ್ಯದ ಪ್ರಮುಖ ಮುಖಂಡರು ತೀವ್ರ ಒತ್ತಡ ಹಾಕುತ್ತಿದ್ದಾರೆ ಎನ್ನಲಾಗಿದೆ.

ಕೆಲ ದಿನಗಳ ಹಿಂದೆ ಬಂಡಾಯಗಾರರಿಗೆ ಕಠಿಣ ಎಚ್ಚರಿಕೆ ಹಾಗೂ ಶಿಸ್ತಿನ ಪಾಠ ಮಾಡಲು ರಾಧಾ ಮೋಹನ್ ದಾಸ್ ಅಗರ್ವಾಲ್ ಪ್ರಯತ್ನಿಸಿದ್ದರೂ, ತಳಮಟ್ಟದಲ್ಲಿ ನಾಯಕರ ನಡುವಿನ ಮುಸುಕಿನ ಗುದ್ದಾಟ ಮಾತ್ರ ನಿಂತಿಲ್ಲ. ಇದು ಹೈಕಮಾಂಡ್‌ಗೂ ತಲೆನೋವಾಗಿ ಪರಿಣಮಿಸಿದೆ ಎನ್ನಲಾಗಿದೆ.

ರಾಜ್ಯ ನಾಯಕರನ್ನು ಒಗ್ಗೂಡಿಸಲು ವಿಫಲರಾಗಿದ್ದಾರೆ ಎಂಬ ಆರೋಪಗಳ ಹಿನ್ನೆಲೆಯಲ್ಲಿ, ರಾಧಾ ಮೋಹನ್ ದಾಸ್ ಅಗರ್‌ವಾಲ್ ಅವರನ್ನು ಆ ಹುಲಿ-ಜವಾಬ್ದಾರಿಯಿಂದ ಬಿಡುಗಡೆಗೊಳಿಸಿ ಬೇರೆ ಹಿರಿಯ ರಾಷ್ಟ್ರೀಯ ನಾಯಕರಿಗೆ (ಉದಾಹರಣೆಗೆ ಧರ್ಮೇಂದ್ರ ಪ್ರಧಾನ್ ಅಥವಾ ಇನ್ಯಾವುದೇ ಪ್ರಮುಖರಿಗೆ) ಕರ್ನಾಟಕದ ಉಸ್ತುವಾರಿ ಪಟ್ಟ ಕಟ್ಟಬಹುದು ಎಂಬ ಮಾತುಗಳು ರಾಜಕೀಯ ವಲಯದಲ್ಲಿ ಹರಿದಾಡುತ್ತಿವೆ.

ಪಕ್ಷದ ಪ್ರಮುಖ ನಿರ್ಧಾರಗಳಲ್ಲಿ ಅಥವಾ ಸಮಿತಿಗಳ ರಚನೆಯಲ್ಲಿ ತಳಮಟ್ಟದ ಕಾರ್ಯಕರ್ತರು ಹಾಗೂ ಹಿರಿಯ ಮುಖಂಡರ ಕೊರತೆ ಎದ್ದು ಕಾಣುತ್ತಿದ್ದು, ರಾಜ್ಯದ ನಾಯಕತ್ವ ಮತ್ತು ಹೈಕಮಾಂಡ್ ನಡುವೆ ಕೊಂಡಿಯಾಗಿ ಕೆಲಸ ಮಾಡಬೇಕಾದ ಉಸ್ತುವಾರಿಗಳು ಕೇವಲ ಸಾಂಸ್ಥಿಕ ಸಭೆಗಳಿಗೆ ಮಾತ್ರ ಸೀಮಿತವಾಗಿದ್ದಾರೆ ಎಂಬ ಟೀಕೆಗಳು ವ್ಯಕ್ತವಾಗಿವೆ.ಪಕ್ಷದ ಸಂಘಟನೆಗೆ ಹಿನ್ನಡೆಯಾಗದಂತೆ ತಡೆಯಲು ದೆಹಲಿ ಮಟ್ಟದಲ್ಲಿ ನಾಯಕರು ಯಾವ ರಣತಂತ್ರ ರೂಪಿಸಲಿದ್ದಾರೆ ಮತ್ತು ರಾಧಾ ಮೋಹನ್ ದಾಸ್ ಅಗರ್‌ವಾಲ್ ಅವರ ಮುಂದಿನ ಜವಾಬ್ದಾರಿ ಏನು ಎಂಬುದನ್ನು ಕಾದು ನೋಡಬೇಕಿದೆ.

## ಶಿಕ್ಷಣ ಮಾರ್ಗದರ್ಶಿ ವಿಶೇಷ

### ವಿದೇಶಿ ಭಾಷಾ (Foreign Language Courses)

ವಿದೇಶಿ ಭಾಷಾ ಕೋರ್ಸ್‌ಗಳು ಜಾಗತಿಕ ಉದ್ಯೋಗ, ಉನ್ನತ ಶಿಕ್ಷಣ, ಪ್ರವಾಸೋದ್ಯಮ, ಅಂತರರಾಷ್ಟ್ರೀಯ ವ್ಯಾಪಾರ ಹಾಗೂ ಭಾಷಾಂತರ (Translation) ಕ್ಷೇತ್ರಗಳಲ್ಲಿ ಉತ್ತಮ ಅವಕಾಶಗಳನ್ನು ಒದಗಿಸುತ್ತವೆ. ಕರ್ನಾಟಕದ ಹಲವು ವಿಶ್ವವಿದ್ಯಾಲಯಗಳು ಮತ್ತು ಮಾನ್ಯತೆ ಪಡೆದ ಸಂಸ್ಥೆಗಳು ಫ್ರೆಂಚ್, ಜರ್ಮನ್, ಜಪಾನೀಸ್, ಸ್ಪ್ಯಾನಿಷ್, ಕೊ–ರಿಯನ್, ಚೈನೀಸ್ ಸೇರಿದಂತೆ ವಿವಿಧ ಭಾಷೆಗಳಲ್ಲಿ ಪ್ರಮಾಣಪತ್ರ, ಡಿಪ್ಲೊಮಾ ಮತ್ತು ಉನ್ನತ ಡಿಪ್ಲೊಮಾ ಕೋರ್ಸ್‌ಗಳನ್ನು ನಡೆಸುತ್ತವೆ.

ಪ್ರಮುಖ ಕೋರ್ಸ್‌ಗಳು

ಫ್ರೆಂಚ್ (French)
ಜರ್ಮನ್ (German)
ಜಪಾನೀಸ್ (Japanese)
ಸ್ಪ್ಯಾನಿಷ್ (Spanish)
ಕೊರಿಯನ್ (Korean)
ಚೈನೀಸ್ (Mandarin)
ರಷ್ಯನ್ (Russian)
ಅರೇಬಿಕ್ (Arabic)

ಕೋರ್ಸ್ ಹಂತಗಳು

1. ಪ್ರಮಾಣಪತ್ರ (Certificate Course)
ಅವಧಿ: 6 ತಿಂಗಳಿಂದ 1 ವರ್ಷ
ಭಾಷೆಯ ಮೂಲಭೂತ ಪರಿಚಯ
ಓದುವಿಕೆ, ಬರವಣಿಗೆ ಮತ್ತು ಮಾತನಾಡುವ ಕೌಶಲ್ಯ

2. ಡಿಪ್ಲೊಮಾ (Diploma Course)
ಅವಧಿ: 1 ವರ್ಷ
ಮಧ್ಯಮ ಮಟ್ಟದ ವ್ಯಾಕರಣ ಮತ್ತು ಸಂವಹನ ಕೌಶಲ್ಯ
ಭಾಷೆಯನ್ನು ನಿತ್ಯ ಜೀವನದಲ್ಲಿ ಬಳಸುವ ಸಾಮರ್ಥ್ಯ

3. ಉನ್ನತ ಡಿಪ್ಲೊಮಾ (Advanced Diploma)
ಅವಧಿ: 1 ವರ್ಷ
ವೃತ್ತಿಪರ ಮಟ್ಟದ ಭಾಷಾ ಜ್ಞಾನ
ಅನುವಾದ, ವ್ಯಾಖ್ಯಾನ ಮತ್ತು ಉದ್ಯೋಗಕ್ಕೆ ಅಗತ್ಯವಾದ ಕೌಶಲ್ಯ

ಕರ್ನಾಟಕದ ಪ್ರಮುಖ ಶಿಕ್ಷಣ ಸಂಸ್ಥೆಗಳು

ಕರ್ನಾಟಕ ವಿಶ್ವವಿದ್ಯಾಲಯ, ಧಾರವಾಡ
ಡಾ. ಮನಮೋಹನ್ ಸಿಂಗ್ ಬೆಂಗಳೂರು ನಗರ ವಿಶ್ವವಿದ್ಯಾಲಯ
ಬೆಂಗಳೂರು ವಿಶ್ವವಿದ್ಯಾಲಯ
ಮೈಸೂರು ವಿಶ್ವವಿದ್ಯಾಲಯ
ಕರ್ನಾಟಕ ರಾಜ್ಯ ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾಲಯ, ವಿಜಯಪುರ
ವಿವಿಧ ಖಾಸಗಿ ಭಾಷಾ ತರಬೇತಿ ಕೇಂದ್ರಗಳು (ಬೆಂಗಳೂರು, ಮೈಸೂರು, ಹುಬ್ಬಳ್ಳಿ, ಮಂಗಳೂರು)

ಪ್ರವೇಶ ಅರ್ಹತೆ

ಪ್ರಮಾಣಪತ್ರ: PUC ಅಥವಾ ತತ್ಸಮಾನ
ಡಿಪ್ಲೊಮಾ: ಪ್ರಮಾಣಪತ್ರ ಪೂರ್ಣಗೊಳಿಸಿರುವುದು (ಕೆಲವು ಸಂಸ್ಥೆಗಳಲ್ಲಿ ನೇರ ಪ್ರವೇಶವೂ ಇರುತ್ತದೆ)
ಉನ್ನತ ಡಿಪ್ಲೊಮಾ: ಡಿಪ್ಲೊಮಾ ಪೂರ್ಣಗೊಳಿಸಿರುವುದು

ಕಲಿಯುವ ವಿಷಯಗಳು

ಭಾಷೆಯ ವ್ಯಾಕರಣ
ಶಬ್ದಕೋಶ (Vocabulary)
ಸಂಭಾಷಣೆ (Conversation Skills)
ಓದುವಿಕೆ ಮತ್ತು ಬರವಣಿಗೆ
ಉಚ್ಚಾರಣೆ (Pronunciation)
ಸಂಸ್ಕೃತಿ ಮತ್ತು ಸಾಹಿತ್ಯ
ಭಾಷಾಂತರ (Translation)
ವ್ಯಾಖ್ಯಾನ (Interpretation)

ಉದ್ಯೋಗಾವಕಾಶಗಳು

ಭಾಷಾಂತರಕಾರ (Translator)
ವ್ಯಾಖ್ಯಾನಕಾರ (Interpreter)
ವಿದೇಶಿ ಭಾಷಾ ಶಿಕ್ಷಕ
BPO/KPO ಉದ್ಯೋಗಗಳು
ಪ್ರವಾಸೋದ್ಯಮ ಮತ್ತು ಆತಿಥ್ಯ ಕ್ಷೇತ್ರ
ರಾಯಭಾರ ಕಚೇರಿಗಳು (Embassies)
ಬಹುರಾಷ್ಟ್ರೀಯ ಕಂಪನಿಗಳು (MNCs)
ಅಂತರರಾಷ್ಟ್ರೀಯ ವ್ಯಾಪಾರ ಸಂಸ್ಥೆಗಳು
ವಿಮಾನಯಾನ ಮತ್ತು ಹೋಟೆಲ್ ಉದ್ಯಮ

ಉನ್ನತ ಶಿಕ್ಷಣ ಅವಕಾಶಗಳು

BA/MA in Foreign Languages
International Relations
Translation Studies
Linguistics
ವಿದೇಶಿ ವಿಶ್ವವಿದ್ಯಾಲಯಗಳಲ್ಲಿ ಉನ್ನತ ಶಿಕ್ಷಣ

ಕೋರ್ಸ್‌ನ ಪ್ರಯೋಜನಗಳು

ಅಂತರರಾಷ್ಟ್ರೀಯ ಮಟ್ಟದ ಉದ್ಯೋಗ ಅವಕಾಶಗಳು
ಉತ್ತಮ ವೇತನದ ಉದ್ಯೋಗಗಳು
ವಿದೇಶದಲ್ಲಿ ಶಿಕ್ಷಣ ಮತ್ತು ಕೆಲಸಕ್ಕೆ ಅನುಕೂಲ
ಹೊಸ ಸಂಸ್ಕೃತಿಗಳನ್ನು ಅರ್ಥಮಾಡಿಕೊಳ್ಳುವ ಅವಕಾಶ
ಜಾಗತಿಕ ಸಂವಹನ ಕೌಶಲ್ಯದ ಅಭಿವೃದ್ಧಿ

ವಿದೇಶಿ ಭಾಷೆಯನ್ನು ಕಲಿಯುವುದು ಇಂದಿನ ಜಾಗತಿಕ ಉದ್ಯೋಗ ಮಾರುಕಟ್ಟೆಯಲ್ಲಿ ಸ್ಪರ್ಧಾತ್ಮಕ ಮುನ್ನಡೆ ನೀಡುವ ಅತ್ಯುತ್ತಮ ಕೌಶಲ್ಯಗಳಲ್ಲಿ ಒಂದಾಗಿದೆ. ವಿಶೇಷವಾಗಿ ಜಪಾನೀಸ್, ಜರ್ಮನ್, ಫ್ರೆಂಚ್ ಮತ್ತು ಕೊರಿಯನ್ ಭಾಷೆಗಳಿಗೆ ಭಾರತದಲ್ಲಿಯೂ ಹಾಗೂ ವಿದೇಶಗಳಲ್ಲಿಯೂ ಹೆಚ್ಚಿನ ಬೇಡಿಕೆಯಿದೆ.

ನ್ಯಾಯ ದೆಸೆ
ಕನ್ನಡ ದಿನಪತ್ರಿಕೆಯನ್ನು ತಪ್ಪದೆ ಓದಿರಿ.

# ಅಂತರಾಷ್ಟ್ರೀಯ ಹುಲಿ ದಿನ..

## ಈ ದಿನದ ಆಚರಣೆ ಏಕೆ? ಇದರ ಮಹತ್ವ




ನ್ಯಾಯ ದೆಸೆ ವಿಶೇಷ

ಹುಲಿ ನಮ್ಮ ದೇಶದ ರಾಷ್ಟ್ರೀಯ ಪ್ರಾಣಿ. ಹುಲಿ ಗಂಭೀರವಾದ ಮತ್ತು ಭವ್ಯವಾದ ಪ್ರಾಣಿ. ಇತ್ತಿಚಿನ ದಿನಗಳಲ್ಲಿ ಅಳುವಿನಂಚಿನತ್ತ ಹುಲಿಯ ಸಂತತಿಯು ಸಾಗುತ್ತಿದೆ. ಕ್ಷೀಣಿಸುತ್ತಿರುವ ಹುಲಿಗಳ ಸಂಖ್ಯೆಯ ಕುರಿತಾಗಿ ಜಾಗೃತಿ ಮೂಡಿಸಲು ಪ್ರತಿ ವರ್ಷ ಜುಲೈ 29 ರಂದು ಅಂತರಾಷ್ಟ್ರೀಯ ಹುಲಿ ದಿನವನ್ನು ಆಚರಿಸಲಾಗುತ್ತದೆ.

ಇಂದು ಜುಲೈ 29 ಅಂತರಾಷ್ಟ್ರೀಯ ಹುಲಿ ದಿನ. ಆಹಾರ ಸರಪಣಿಯಲ್ಲೂ ಹುಲಿ ಅತ್ಯಂತ ಪ್ರಮುಖ ಸ್ಥಾನದಲ್ಲಿದೆ. ಆದರೆ ಪರಿಸರ ನಾಶ, ಹುಲಿಯ ಕಳ್ಳಬೇಟೆ, ಅಭಿವೃದ್ಧಿಯ ಹೆಸರಿನಲ್ಲಿ ನಡೆಸಲಾಗುವ ಕೆಲವೊಂದು ಕಾರ್ಯಗಳಿಂದ ಹುಲಿಯ ಸಂತತಿ ಕ್ಷೀಣಿಸಲು ಕಾರಣವಾಗುತ್ತಿದೆ. ಹುಲಿ ನಮ್ಮ ದೇಶದ ರಾಷ್ಟ್ರೀಯ ಪ್ರಾಣಿ. ಹುಲಿ ಗಂಭೀರವಾದ ಮತ್ತು ಭವ್ಯವಾದ ಪ್ರಾಣಿ. ಇತ್ತಿಚಿನ ದಿನಗಳಲ್ಲಿ ಅಳುವಿನಂಚಿನತ್ತ ಹುಲಿಯ ಸಂತತಿಯು ಸಾಗುತ್ತಿದೆ. ಕ್ಷೀಣಿಸುತ್ತಿರುವ ಹುಲಿಗಳ ಸಂಖ್ಯೆಯ ಕುರಿತಾಗಿ ಜಾಗೃತಿ ಮೂಡಿಸಲು ಪ್ರತಿ ವರ್ಷ ಜುಲೈ 29 ರಂದು ಅಂತರಾಷ್ಟ್ರೀಯ ಹುಲಿ ದಿನವನ್ನು ಆಚರಿಸಲಾಗುತ್ತದೆ.

ಅಕ್ರಮವಾಗಿ ನಡೆಸುತ್ತಿರುವ ವನ್ಯಜೀವಿಗಳ ವ್ಯಾಪಾರ, ಮಾನವ ಮತ್ತು ವನ್ಯಜೀವಿಗಳ ನಡುವಿನ ಸಂಘರ್ಷ ಹಾಗೂ ಕಾಡಿನ ನಾಶದಿಂದಾಗಿ ಹುಲಿಗಳ ಸಂಖ್ಯೆ ಇಳಿಮುಖವಾಗುತ್ತಿದೆ. ಜಗತ್ತಿನ ಕೇವಲ 13 ರಾಷ್ಟ್ರಗಳಲ್ಲಿ ಮಾತ್ರ ಹುಲಿಗಳು ಕಂಡುಬರುತ್ತವೆ. ಈ ಹಿನ್ನಲೆಯಲ್ಲಿ ಹುಲಿಗಳ ಸಂರಕ್ಷಣೆ ಕುರಿತು ಅರಿವು ಮೂಡಿಸುವ ಸಲುವಾಗಿ ಪ್ರತಿ ವರ್ಷ ಅಂತರಾಷ್ಟ್ರೀಯ ಹುಲಿ ದಿನವನ್ನು ಆಚ–ರಿಸಲಾಗುತ್ತದೆ.

ಅಂತರಾಷ್ಟ್ರೀಯ ಹುಲಿ ದಿನ ಆಚರಣೆಹಿನ್ನಲೆ ಅಂತರಾಷ್ಟ್ರೀಯ ಹುಲಿ ದಿನ ಆಚರಣೆಹಿನ್ನಲೆ ಹುಲಿ ಸಂರಕ್ಷಣೆ ಮತ್ತು ಸಾರ್ವಜನಿಕರಲ್ಲಿ ಹುಲಿಗಳ ಬಗ್ಗೆ ಜಾಗೃತಿ ಮೂಡಿಸುವ ಸಲುವಾಗಿ 2010ರ ಜುಲೈ 29ರಂದು ಮೊದಲ ಬಾರಿಗೆ ಅಂತರಾಷ್ಟ್ರೀಯ ಹುಲಿ ದಿನವನ್ನು ರಷ್ಯಾದ ಸೆಂಟ್ ಪೀಟರ್ ಬರ್ಗ್‌ನಲ್ಲಿ ಆಚರಿಸಲಾಯಿತು. ಈ ದಿನದಂದು ಹುಲಿ ಸಂರಕ್ಷಣೆ ಕುರಿತು ಚರ್ಚೆ, ಉಪನ್ಯಾಸ, ಜಾಥಾ, ವಿಚಾರ ಸಂಕಿರಣ ಹಾಗೂ ಛಾಯಚಿತ್ರ ಪ್ರದರ್ಶನ ಮೂಲಕ ಹುಲಿ ಭೇಟೆ, ಹುಲಿಗಳ ರಕ್ಷಣೆಯ ಕುರಿತಾದ ಜಾಗೃತಿ ಕಾರ್ಯಕ್ರಮಗಳನ್ನು ನಡೆಸಲಾಗುತ್ತದೆ. ಇಂದಿನ ದಿನಗಳಲ್ಲಿ ಹುಲಿಗಳ ಬಗ್ಗೆ ಜನರಲ್ಲಿ ಅರಿವು ಮೂಡಿಸುವುದು, ಮತ್ತು ಹುಲಿ ಸಂರಕ್ಷಣೆಯನ್ನು ಉತ್ತೇಜಿಸುವುದು ಈ ಆಚರಣೆಯ ಪ್ರಮುಖ ಉದ್ದೇಶವಾಗಿದೆ.

ನಾಲ್ಕು ವರ್ಷಕ್ಕೊಮ್ಮೆ ಹುಲಿ ಗಣತಿ ನಾಲ್ಕು ವರ್ಷಕ್ಕೊಮ್ಮೆ ಹುಲಿ ಗಣತಿ ನಾಲ್ಕು ವರ್ಷಕ್ಕೊಮ್ಮೆ ಹುಲಿ ಗಣತಿ ಮಾಡಲಾಗುತ್ತದೆ. 2018ರ ಹುಲಿ ಗಣತಿ ಪ್ರಕಾರ ದೇಶದಲ್ಲಿ 2967 ಹುಲಿಗಳು ಇವೆ. ಈ ಮೂಲಕ ಜಗತ್ತಿನಲ್ಲಿ ಸಂತತಿಗೆ ಅತ್ಯಂತ ಸುರಕ್ಷಿತ ಸ್ಥಳ ಭಾರತವಾಗಿದೆ. 2018ರ ಹುಲಿ ಗಣತಿ ಗೆ 1400 ಕ್ಯಾಮೆರಾ ಟ್ರ್ಯಾಪ್‌ಗಳನ್ನು ಬಳಸಲಾಗಿತ್ತು. ಪ್ರಪಂಚದ 13 ದೇಶಗಳ ಕಾಡಿನಲ್ಲಿ ಮಾತ್ರ ಹುಲಿಗಳನ್ನು ನಾವು ಕಾಣಬಹುದಾಗಿದೆ. ವಿಶ್ವದಲ್ಲೇ ಅತಿಹೆಚ್ಚು ಹುಲಿಗಳು ಇರುವುದು ಅದು ಏಷ್ಯಾಖಂಡದಲ್ಲೇ. 2006 ರಿಂದ ಹುಲಿಗಳ ಗಣತಿಯನ್ನು ಮಾಡಲಾಗುತ್ತದೆ. ಈ ಪ್ರಕ್ರಿಯೆ ನಾಲ್ಕು ವರ್ಷಕ್ಕೊಮ್ಮೆ ವೈಜ್ಞಾನಿಕ ರೀತಿಯಲ್ಲಿ ನಡೆಯುತ್ತದೆ. 2006, 2010, 2014 ಹಾಗೂ 2018ರಲ್ಲಿ ಗಣತಿ ಆಗಿದೆ. ನಾಲ್ಕು ವರ್ಷಗಳಿಗೆ ಹೋಲಿಸಿದರೆ ಹುಲಿಗಳ ಸಂಖ್ಯೆಯಲ್ಲಿ ಶೇ. 33ರಷ್ಟು ಹೆಚ್ಚಳವಾಗಿದೆ.

ಮಧ್ಯಪ್ರದೇಶದಲ್ಲಿ ಹುಲಿಗಳ ಸಂಖ್ಯೆ ಹೆಚ್ಚು ಮಧ್ಯಪ್ರದೇಶದಲ್ಲಿ ಹುಲಿಗಳ ಸಂಖ್ಯೆ ಹೆಚ್ಚು 2018ರ ಗಣತಿ ಪ್ರಕಾರ ಮಧ್ಯಪ್ರದೇಶದಲ್ಲಿ 526 ಹುಲಿಗಳಿದ್ದು, ದೇಶದಲ್ಲೇ ಮೊದಲ ಸ್ಥಾನದಲ್ಲಿದೆ. ಕರ್ನಾಟಕದಲ್ಲಿ 524 ಹುಲಿಗಳಿದ್ದು, ಎರಡನೇ ಸ್ಥಾನದಲ್ಲಿದೆ. ಉತ್ತರಾಖಂಡದಲ್ಲಿ 442 ಹುಲಿಗಳಿದ್ದು ಮೂರನೇ ಸ್ಥಾನದಲ್ಲಿದೆ. 2014ರಲ್ಲಿ ಕರ್ನಾಟಕ ರಾಜ್ಯದಲ್ಲಿ 406 ಹುಲಿಗಳಿದ್ದವು.

ಗಣತಿಯನ್ನ ಹೇಗೆ ಮಾಡಲಾಗುತ್ತದೆ ಗಣತಿಯನ್ನ ಹೇಗೆ ಮಾಡಲಾಗುತ್ತದೆ ಹುಲಿ ಗಣತಿಯನ್ನು ನಾಲ್ಕು ವಿಧಾನದಲ್ಲಿ ನಡೆಸಲಾಗುತ್ತದೆ. ಮೊದಲ ಎರಡು ಹಂತದಲ್ಲಿ ಹುಲಿ ಇರುವಿಕೆಯ ಚಿಹ್ನೆ, ಸ್ಕ್ಯಾಟ್ ಮತ್ತು ಪಗ್ ಮಾರ್ಕ್ ಮೂಲಕ ಗುರುತಿಸಲಾಗುತ್ತದೆ. ಮೂರನೇ ಹಂತದಲ್ಲಿ ಜಿಐಎಸ್ ಅಪ್ಲಿಕೇಶನ್‌ನೊಂದಿಗೆ ಸಿದ್ಧಪಡಿಸಿದ ಕ್ಯಾಮೆರಾ ಟ್ರ್ಯಾಪ್‌ಗಳನ್ನು ಬಳಸಿ ಎಣಿಸಲಾಗುತ್ತದೆ. ಕೊನೆ ಹಂತದಲ್ಲಿ ಕ್ಯಾಮೆರಾ ಹಾಕದ ಪ್ರದೇಶದಲ್ಲಿ ಸರ್ವೇ ಕಾರ್ಯ ನಡೆಸಿ ದತ್ತಾಂಶ ಕಲೆ ಹಾಕಲಾಗುತ್ತದೆ.

ಹುಲಿಗಳ ಸಂಖ್ಯೆ ಹೆಚ್ಚಾಗಲು ಕಾರಣವೇನು ಹುಲಿಗಳ ಸಂಖ್ಯೆ ಹೆಚ್ಚಾಗಲು ಕಾರಣವೇನು ಹುಲಿಗಳ ಸಂಖ್ಯೆ ಹೆಚ್ಚಾಗಲು ಮುಖ್ಯ ಕಾರಣ, ಅರಣ್ಯ ಇಲಾಖೆಯ ಜಾಗರೂಕತೆ ಹಾಗೂ ಸಂರಕ್ಷಣೆಯ ಪ್ರಯತ್ನಗಳು ಹುಲಿ ಸಂಖ್ಯೆ ಹೆಚ್ಚಾಗಲು ಒಂದು ಕಾರಣ. ಜತೆಗೆ ಕಳ್ಳ ಬೇಟೆ ಕಡಿಮೆ ಆಗಿದ್ದು, ಹುಲಿ ಸಂರಕ್ಷಿತ ಪ್ರದೇಶಗಳನ್ನು ಹೆಚ್ಚು ಮಾಡಲಾಗಿದೆ. ನ್ಯಾಷನಲ್ ಟೈಗರ್ ಕನ್ಸರ್‌ವೇಷನ್ ಅಥಾರಿಟಿ (ರಾಷ್ಟ್ರೀಯ ಹುಲಿ ಸಂರಕ್ಷಣಾ ಪ್ರಾಧಿಕಾರ) ಸ್ಥಾಪನೆಯಾಗಿದ್ದು ಪ್ರಯೋಜನಕಾರಿಯಾಗಿದೆ.

ರಾಷ್ಟ್ರೀಯ ಹುಲಿ ಸಂರಕ್ಷಣಾ ಪ್ರಾಧಿಕಾರ ರಾಷ್ಟ್ರೀಯ ಹುಲಿ ಸಂರಕ್ಷಣಾ ಪ್ರಾಧಿಕಾರ ದೇಶದಲ್ಲಿ ಹುಲಿಗಳ ಸಂರಕ್ಷಣೆಗಾಗಿ 1973ರಲ್ಲಿ ಪ್ರಾಜೆಕ್ಟ್ ಟೈಗರ್ ಅಸ್ತಿತ್ವಕ್ಕೆ ಬಂತು. ನಂತರ ಇದು ರಾಷ್ಟ್ರೀಯ ಹುಲಿ ಸಂರಕ್ಷಣಾ ಪ್ರಾಧಿಕಾರವಾಗಿ ಬದಲಾಗಿ ಹುಲಿಗಳ ಉಳಿವಿಗಾಗಿ ಕೆಲಸ ಮಾಡುತ್ತಿದೆ. ಸ್ಪೆಷಲ್ ಟೈಗರ್ ಪ್ರೊಟೆಕ್ಷನ್ ಫೋರ್ಸ್ ದೇಶದಲ್ಲೇ ಮೊದಲ ಬಾರಿಗೆ ಬಂಡೀಪುರ ಮತ್ತು ನಾಗರಹೊಳೆಯಲ್ಲಿ ಜಾರಿಗೆ ತರಲಾಗಿದೆ.

ಕರ್ನಾಟಕದ ಹುಲಿ ಸಂರಕ್ಷಿತ 5 ಪ್ರದೇಶ ಕರ್ನಾಟಕದ ಹುಲಿ ಸಂರಕ್ಷಿತ 5 ಪ್ರದೇಶ ಕರ್ನಾಟಕದ ಹುಲಿ ಸಂರಕ್ಷಿತ 5 ಪ್ರದೇಶಗಳು–ಬಂಡೀಪುರ, ನಾಗರಹೊಳೆ, ಬಿಆರ್‌ಟಿ, ಭದ್ರಾ ಹಾಗೂ ಕಾಳಿ .

ಹುಲಿ ಸಂರಕ್ಷಣೆಯಾದರೆ ಕಾಡು ಸಮೃದ್ಧ ಹುಲಿ ಸಂರಕ್ಷಣೆಯಾದರೆ ಕಾಡು ಸಮೃದ್ಧ ಹುಲಿ ಸಂರಕ್ಷಣೆಯಾದರೆ ಕಾಡು ಚೆನ್ನಾಗಿರುತ್ತದೆ. ಪ್ರಾಕೃತಿಕ ಸಮತೋಲನಕ್ಕೂ ಇದು ಸಹಕಾರಿ. ಒಂದು ಕಾಡಿನಲ್ಲಿ ಹುಲಿಗಳ ಸಂಖ್ಯೆ ಹೆಚ್ಚಿದೆ ಎಂದರೆ ಆ ಕಾಡು ಸಮೃದ್ಧವಾಗಿದೆ ಎಂದರ್ಥ ಎನ್ನುತ್ತಾರೆ ವನ್ಯಜೀವಿ ತಜ್ಞರು. ಹುಲಿ ಇರುವ ಜಾಗದಲ್ಲಿ ಪಕ್ಷಿ, ಕೀಟ, ಕಾಡು ಪ್ರಾಣಿಗಳು ಹೇರಳವಾಗಿರುತ್ತವೆ. ಬಯೋ ಸಿಸ್ಟಂ ಕೂಡ ಉತ್ತಮವಾಗಿರುತ್ತದೆ.

ಕೊನೆಯದಾಗಿ, ಹುಲಿಗಳ ರಕ್ಷಣೆ ಕೇವಲ ಸರ್ಕಾರ ಅಥವಾ ಅರಣ್ಯ ಇಲಾಖೆಯ ಜವಾಬ್ದಾರಿಯಲ್ಲ, ಅದು ನಮ್ಮೆಲ್ಲರ ಕರ್ತವ್ಯವಾಗಿದೆ. ವನ್ಯಜೀವಿಗಳ ಬಗ್ಗೆ ಜಾಗೃತಿ ಮೂಡಿಸೋಣ, ಕಾಡುಗಳನ್ನು ಉಳಿಸೋಣ ಮತ್ತು ಹುಲಿಗಳು ಕಾಡಿನಲ್ಲಿ ಮುಕ್ತವಾಗಿ ಘರ್ಜಿಸುವಂತೆ ವಾತಾವರಣ ನಿರ್ಮಿಸೋಣ. "ಹುಲಿ ಉಳಿಸಿ, ಕಾಡು ಬೆಳೆಸಿ, ಪರಿಸರ ಸಂರಕ್ಷಿಸಿ" ಎಂದು ಹೇಳುತ್ತಾ ನನ್ನ ಲೇಖನಕ್ಕೆ ವಿರಾಮ......

# ಯಡಿಯಾಪುರ ಬಳಗದಿಂದ ಪ್ರಸಾದ ವ್ಯವಸ್ಥೆ

ನ್ಯಾಯ ದೆಸೆ ನ್ಯೂಸ್

ತಾಳಿಕೋಟಿ: ಪಟ್ಟಣದ ಆರಾಧ್ಯ ದೈವ ಶ್ರೀ ಖಾಸ್ಗತ ಮಹಾ ಶಿವಯೋಗಿಗಳ ಜಾತ್ರೋತ್ಸವದ ಕೊನೆಯ ದಿನವಾದ ಸೋಮವಾರದಂದು ಜಾತ್ರೆಯ ವಿಶೇಷ ಕಾರ್ಯಕ್ರಮವಾದ ಆನೆ ಅಂಬಾರಿ ಹಾಗೂ ರಥೋತ್ಸಕ್ಕೆ ಆಗಮಿಸುವ ಭಕ್ತಾದಿಗಳಿಗೆ ಬಿಜೆಪಿ ಮುಖಂಡ ಬಸನಗೌಡ ಪಾಟೀಲ ಯಡಿಯಾಪುರ ಅಭಿಮಾನಿ ಬಳಗದ ವತಿಯಿಂದ ಬಾಳೆಹಣ್ಣು ಪ್ರಸಾದ ವ್ಯವಸ್ಥೆಯನ್ನು ಮಾಡಲಾಗಿತ್ತು.



ಈ ಸಂದರ್ಭದಲ್ಲಿ ಪ್ರಸಾದ ವಿತರಣೆಗೆ ಚಾಲನೆ ನೀಡಿ ಮುಖಂಡ ಬಸನಗೌಡ ಪಾಟೀಲ ಯಡಿಯಾಪುರ ( ಬಿ.ಸಾಲವಾಡಗಿ) ಮಾತನಾಡಿ ಖಾಸ್ಗತ ಅಜ್ಜನ ಜಾತ್ರೆ ಇಡೀ ರಾಜ್ಯದಲ್ಲಿಯೇ ಹೆಸರುವಾಸಿಯಾದ ಜಾತ್ರೆಯಾಗಿ ಇಂದು ಬೆಳದಿದೆ. ಶ್ರೀಮಠದ ಪೂಜ್ಯ ಸಿದ್ದಲಿಂಗ ದೇವರು ಈ ಭಾಗದ ಭಕ್ತರನ್ನು ಆಧ್ಯಾತ್ಮಿಕವಾಗಿ ಸಂಸ್ಕರಿಸುವ ಕೆಲಸ ಮಾಡುತ್ತಿದ್ದಾರೆ. ಇವತ್ತು ನನ್ನ ಬಳಗದ ಮಿತ್ರರು ಭಕ್ತರಿಗೆ ಬಾಳೆಹಣ್ಣು ಪ್ರಸಾದ ವ್ಯವಸ್ಥೆಯನ್ನು ಮಾಡಿಸಿದ್ದಾರೆ ಬರುವ ವರ್ಷ ಬಹಳ ದೊಡ್ಡ ಪ್ರಮಾಣದಲ್ಲಿ ಪ್ರಸಾದ ವ್ಯವಸ್ಥೆಯನ್ನು ಮಾಡಿಸುವ ಗುರಿ ಹೊಂದಿದ್ದೇನೆ. ಶ್ರೀ ಖಾಸ್ಗತ ಅಜ್ಜನ ಕೃಪೆ ಸದಾ ನಮ್ಮೆಲ್ಲರ ಮೇಲೆ ಇರಲಿ ಎಂದರು. ಪ್ರಸಾದ ಸೇವೆಯಲ್ಲಿ ಯಡಿಯಾಪುರ ಅಭಿಮಾನಿ ಬಳಗದ ಸದಸ್ಯರಾದ ಶರಣಗೌಡ ಪಾಟೀಲ(ಕರಿಭಾವಿ), ಕಾಶಿರಾಯ ದೇಸಾಯಿ(ಶಳ್ಳಗಿ), ಬಸವರಾಜ್ ನಾಯ್ಕಲ್ (ಶಳ್ಳಗಿ), ಸುಗರೆಡ್ಡಿ ನಾಯ್ಕಲ್, ಅಮರೇಶ ಮತ್ತಿತರು ಇದ್ದರು. ಸುಮಾರು ಆರು ಸಾವಿರ ಜನರಿಗೆ ಪ್ರಸಾದ ವ್ಯವಸ್ಥೆಯನ್ನು ಮಾಡಲಾಗಿತ್ತು.

# ಅಜ್ಜನ ಜಾತ್ರೆ: ಭಕ್ತರಿಗೆ ವಿಶೇಷ ಪ್ರಸಾದ ವ್ಯವಸ್ಥೆ

ನ್ಯಾಯ ದೆಸೆ ನ್ಯೂಸ್

ತಾಳಿಕೋಟಿ: ಪಟ್ಟಣದ ಆರಾಧ್ಯ ದೈವ ಶ್ರೀ ಖಾಸ್ಗತ ಮಹಾ ಶಿವಯೋಗಿಗಳ ಜಾತ್ರೋತ್ಸವದ ಕೊನೆಯ ದಿನವಾದ ಸೋಮವಾರದಂದು ಜಾತ್ರೆಯ ವಿಶೇಷ ಕಾರ್ಯಕ್ರಮವಾದ ಆನೆ ಅಂಬಾರಿ ಹಾಗೂ ರಥ–ೋತ್ಸಕ್ಕೆ ಆಗಮಿಸುವ ಭಕ್ತಾದಿಗಳಿಗೆ ಶ್ರೀ ಗಜಾನನ ವೃತ್ತ ಬಳಗ, ಮಾನಸಿಂಗ್ ಗೆಳೆಯರ ಬಳಗ ಹಾಗೂ ಮಲ್ಲಿಕಾರ್ಜುನ ತರುಣ ಸಂಘದ ಸಹಯೋಗದಲ್ಲಿ ವಿಶೇಷ ಸಾಬುದಾನಿ ಸುಸಲಾ, ಭಜಿ ಹಾಗೂ ಕರದಂಟು ಪ್ರಸಾದ ವ್ಯವಸ್ಥೆಯನ್ನು ಮಾಡಲಾಗಿತ್ತು.

ಈ ಸಂದರ್ಭದಲ್ಲಿ ಪ್ರಸಾದ ವಿತರಣೆಗೆ ಚಾಲನೆ ನೀಡಿ ಮಾತನಾಡಿದ ಬಳಗದ ಅಧ್ಯಕ್ಷ ಮಾನಸಿಂಗ್ ಕೊಕಟನೂರ ಅವರು ಶ್ರೀ ಖಾಸ್ಗತ ಅಜ್ಜನ ಜಾತ್ರೆ ಇಡೀ ರಾಜ್ಯದಲ್ಲಿಯೇ ಹೆಸರುವಾಸಿಯಾದ ಜಾತ್ರೆಯಾಗಿ ಇಂದು ಬೆಳದಿದೆ. ಶ್ರೀಮಠದ ಪೂಜ್ಯ ಸಿದ್ದಲಿಂಗ ದೇವರು ಈ ಭಾಗದ ಭಕ್ತರನ್ನು ಆಧ್ಯಾತ್ಮಿಕವಾಗಿ ಸಂಸ್ಕರಿಸುವ ಕೆಲಸ ಮಾಡುತ್ತಿದ್ದಾರೆ. ನಾವು ನಮ್ಮ ಬಳಗದಿಂದ ಕಳೆದ 22 ವರ್ಷಗಳಿಂದ ಪ್ರಸಾದ ಸೇವೆ ಮಾಡುತ್ತಿದ್ದೇವೆ ಪ್ರತಿ ವರ್ಷವೂ ವಿಭಿನ್ನವಾದ ಆಹಾರ ಪದಾರ್ಥಗಳನ್ನು ಸಿದ್ದುಪಡಿಸುತ್ತಿರುವುದು ನಮ್ಮ ವಿಶೇಷತೆಯಾಗಿದೆ.

ಇವತ್ತು ಸುಮಾರು ಹತ್ತು ಸಾವಿರ ಭಕ್ತರಿಗೆ ಆಗುವಷ್ಟು ಪ್ರಸಾದವನ್ನು ಸಿದ್ದಪಡಿಸಿದ್ದೇವೆ. ಭಕ್ತರು ಶಾಂತ ರೀತಿಯಿಂದ ಪ್ರಸಾದವನ್ನು ಸ್ವೀಕರಿಸಿ ಅಜ್ಜನ ಕೃಪೆಗೆ ಪಾತ್ರರಾಗಬೇಕು ಎಂದರು. ಪ್ರಸಾದ ಸೇವೆಯಲ್ಲಿ ಬಳಗದ ಸದಸ್ಯರಾದ ಕಸ್ತೂರಿ ಪ್ರಥಮಶೇಟ್ಟಿ, ಸಂತೋಷ ಕುಲಕರ್ಣಿ,



ಅನಿಲ್ ಕಸ್ತೂರಿ, ಕುಮಾರ ಸಜ್ಜನ, ಅಮರಪ್ಪ ಗೋನಾಳ, ರಮೇಶ ಮಾಲಿಪಾಟೀಲ, ಅನಿಲ್ ಕುಂಬಾರ, ಚಿನ್ನ ಹಿಪ್ಪರಗಿ, ಸೋಮು ಗೆಜ್ಜಿ, ಬಸವರಾಜ ಹೊಟ್ಟಿ, ಮಲ್ಲಿಕಾರ್ಜುನ ಕಸಭೆಗೌಡರ,ರಮೇಶ ಮದ್ರಾಸಿ, ವೀರೇಶ ಕಸಭೆಗೌಡ್ರ, ಶರಣಗೌಡ ಗೊಟಗುಣಕಿ, ಪಾಪು ಸಗರ, ರವೀಂದ್ರ ಕೊಳಕೂರ, ಮಹಮ್ಮದ ಸಾಲವಾಡಗಿ, ಅಪ್ಪುಗೌಡ ಪಾಟೀಲ, ವೀವೇಕ ಪತ್ತಾರ, ಮಹಾಂತೇಶ ಗೋಗಿ, ದತ್ತು ಉಭಾಳೆ, ರವಿ ಚಂದುಕರ, ರಾಜು ಸಜ್ಜನ, ಪ್ರಕಾಶ ಹಜೇರಿ, ಜಗದೀಶ ಬಿಳೇಭಾವಿ ಮತ್ತೀತರರು ಇದ್ದರು.

# ಕೇಂದ್ರದಿಂದ ಬಳಿ ಬರ ನೆರವು ಕೊಡಿಸಲು ಸಂಸದರಲ್ಲಿ ಮನವಿ : ಡಿಸಿಎಂ ಪರಮೇಶ್ವರ್

ನ್ಯಾಯ ದೆಸೆ ನ್ಯೂಸ್

ಬೆಂಗಳೂರು: ರಾಜ್ಯದಲ್ಲಿ ಬರ ಪರಿಸ್ಥಿತಿ ಗಂಭೀರವಾಗಿದೆ.ಕೇಂದ್ರದಿಂದ ಹೆಚ್ಚಿನ ನೆರವು ಕೊಡಿಸಲು ರಾಜ್ಯವನ್ನು ಪ್ರತಿನಿಧಿಸುವ ಸಂಸದರಲ್ಲಿ ಮನವಿ ಮಾಡುವುದಾಗಿ ಉಪ ಮುಖ್ಯಮಂತ್ರಿಗಳು, ಕಂದಾಯ ಮತ್ತು ಕ್ರೀಡಾ ಸಚಿವರಾದ ಡಾ.ಜಿ.ಪರಮೇಶ್ವರ್ ತಿಳಿಸಿದರು.

ನಗರದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಈ ನಿಟ್ಟಿನಲ್ಲಿ ಚರ್ಚಿಸಲು ಮುಖ್ಯಮಂತ್ರಿಗಳು ಇಂದು ಸಂಜೆ 6 ಗಂಟೆಗೆ ದೆಹಲಿಯಲ್ಲಿ ರಾಜ್ಯದ ಲೋಕಸಭಾ ಮತ್ತು ರಾಜ್ಯಸಭಾ ಸದಸ್ಯರನ್ನು ಸಭೆ ಕರೆದಿದ್ದಾರೆ ಎಂದರು. ಬರ ಪರಿಸ್ಥಿತಿಯ ಸಮರ್ಥ ನಿರ್ವಹಣೆಗೆ ಕೈಗೊಳ್ಳಬೇಕಾದ ಕ್ರಮಗಳ ಬಗ್ಗೆ ಸರ್ಕಾರವು ಈಗಾಗಲೇ ಅನೇಕ ಚರ್ಚೆಗಳನ್ನು ಮಾಡಿದೆ. ಈ ಮಧ್ಯೆ ಪ್ರಧಾನಮಂತ್ರಿಗಳು, ಗೃಹ ಸಚಿವರು ಮತ್ತು ಕೃಷಿ ಸಚಿವರಿಗೆ ನಾನು ಪತ್ರವನ್ನು ಬರೆದಿದ್ದೇನೆ. ಮುಖ್ಯಮಂತ್ರಿಗಳು ಕೂಡ ಪ್ರಧಾನಿಮಂತ್ರಿಗಳಿಗೆ ಪತ್ರ ಬರೆದಿದ್ದಾರೆ. ಈವರೆಗೆ ಯಾವುದೇ ಪ್ರತಿಕ್ರಿಯೆ ಬಂದಿಲ್ಲ.

ರಾಜ್ಯದ ಅನೇಕ ಯೋಜನೆಗಳ ಬಗ್ಗೆಯೂ ಪ್ರಸ್ತಾವನೆಗಳು ಕೇಂದ್ರಕ್ಕೆ ಸಲ್ಲಿಸಿದ್ದೇವೆ.



ಅದರ ಬಗ್ಗೆಯೂ ನಮ ರಾಜ್ಯದ ಪ್ರತಿನಿಧಿಗಳಲ್ಲಿ ಚರ್ಚೆ ಮಾಡಿ, ಸಂಬಂಧಪಟ್ಟ ಸಚಿವರುಗಳಲ್ಲಿ ಮಾತನಾಡಿ ಮಂಜೂರು ಮಾಡಿಸಿಕೊಡಲು ಪ್ರಯತ್ನಿಸುವ ಬಗ್ಗೆಯೂ ಇಂದಿನ ಸಭೆಯಲ್ಲಿ ಚರ್ಚೆಯಾಗಲಿದೆ ಎಂದು ಮಾಹಿತಿ ನೀಡಿದರು. ನಾನು ಮತ್ತು ಮುಖ್ಯಮಂತ್ರಿಗಳು ಈಗಾಗಲೇ ನಮ ರಾಜ್ಯದಿಂದ ಹೋಗಿರುವ ಅಧಿಕಾರಗಳನ್ನು ದೆಹಲಿಯಲ್ಲಿ ಭೇಟಿಯಾಗಿ ಸಭೆ ನಡೆಸಿ ಚರ್ಚಿಸಿದ್ದೇವೆ. ಅವಶ್ಯ ಬಿದ್ದಲ್ಲಿ ಅವರ ಸಹಾಯವನ್ನು ಪಡೆದುಕೊಳ್ಳುತ್ತೇವೆ ಎಂದರು.

ಇದರ ಜೊತೆಗೆ ಸಚಿವ ಸಂಪುಟ ವಿಸ್ತರಣೆಯ ಬಗ್ಗೆಯೂ ಚರ್ಚೆ ನಡೆಯುವ ಸಾಧ್ಯತೆ ಇದೆ. ಅನುಮತಿ ಸಿಕ್ಕಿದರೆ ಸಚಿವ ಸಂಪುಟ ವಿಸ್ತರಣೆಯಾಗಬಹುದು ಎಂದು ಈ ವೇಳೆ ತಿಳಿಸಿದರು. ಸಂಸತ್ತಿನಲ್ಲಿ ಬರದ ಬಗ್ಗೆ ಪ್ರಸ್ತಾಪಿಸುವಂತೆ ಮಲ್ಲಿಕಾರ್ಜುನ ಖರ್ಗೆ ಅವರಿಗೆ ಮನವಿ ಸಲ್ಲಿಸುತ್ತೀರ ಎಂಬ ಮಾಧ್ಯಮದ ಪ್ರಶ್ನೆಗೆ ಪ್ರತಿಕ್ರಿಯಿಸಿದ ಪರಮೇಶ್ವರ್, ಖಂಡಿತವಾಗಿ ಮನವಿ ಮಾಡುತ್ತೇವೆ.

ಸಂಸತ್ತಿನಲ್ಲಿ ಅಥವಾ ಗೃಹ ಸಚಿವರು ಅಥವಾ ಕೃಷಿ ಸಚಿವರಲ್ಲಿ ಪ್ರತ್ಯೇಕವಾಗಿ ಅವರು ಮಾತನಾಡಬಹುದು. ಒಟ್ಟಾರೆಯಾಗಿ ರಾಜ್ಯಕ್ಕೆ ಸಹಾಯ ಹಸ್ತ ಚಾಚುವಂತೆ ಕೇಂದ್ರಕ್ಕೆ ಪ್ರಸ್ತಾಪ ಮಾಡುವಂತೆ ಮನವಿ ಮಾಡುತ್ತೇವೆ ಎಂದರು.

OWNER, PUBLISHER, PRINTER BY IRFAN K H NO. 3/117, BALAGANUR, SINDHANOOR, RAICHUR-584138 KARNATAKA AND PRINTED AT SHIVANI PRINTERS, HULKOTI, NEW COURT, OPPOSITE PLOT NO. 28 RS NO. 312/3B, GARAG COMPLEX, GADAG-582101